ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 31 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 05–08–2023 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 31 Title- Code: KARKAN 28269 Chitradurga Date : 05-08-2023 Satraday Page: 4 Price: Rs. 2-00

ಒಳ ಪುಟದ ಸುದ್ದಿಗಳು
2 ಸಿದ್ದೇಶ್ ಯಾದವ್ ನುಡಿ ನಮನ : ಸಿದ್ದೇಶ್ ಯಾದವ್ ಸ್ನೇಹ ಬಳಗ
3 ಶುದ್ಧ ಕುಡಿಯುವ ನೀರು ಪೂರೈಕೆ ಪುರಸಭೆ ಒತ್ತು
4 ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜನ್ಮದಿನಾಚರಣೆ ಕಾರ್ಯಕ್ರಮ

# ಕಲುಷಿತ ನೀರು ಸೇವನೆ ಮತ್ತಿಬ್ಬರ ಸಾವು, ಸಾವಿನ ಸಂಖ್ಯೆ ಐದಕ್ಕೆ ಏರಿಕೆ

**ಚಿತ್ರದುರ್ಗ** : ಕವಾಡಿಗರಹಟ್ಟಿ ಬಡಾವಣೆಯ ಕಲುಷಿತ ನೀರು ಸೇವಿನೆ ದುರಂತ ಪ್ರಕರಣದಲ್ಲಿ ಸಾವಿನ ಸಂಖ್ಯೆ 5 ಕ್ಕೆ ಏರಿಕೆಯಾಗಿ, ಅಸ್ವಸ್ಥರ ಸಂ–ಖ್ಯೆಯೂ ಕೂಡ 165 ಕ್ಕೆ ಏರಿಕೆಯಾಗಿದೆ.

ಕವಾಡಿಗರಹಟ್ಟಿಯ ರುದ್ರಪ್ಪ(50) ಹಾಗೂ ಪಾರ್ವತಮ್ಮ(75) ಚಿಕಿತ್ಸೆ ಫಲಿಸದೆ ಸಾವನ್ನಪ್ಪಿರುವ ದುರ್ಧೈವಿಗಳು.

ಕಳೆದ ಐದು ದಿನಗಳ ಹಿಂದೆ ಚಿತ್ರದುರ್ಗ ನಗರದ ಕವಾಡಿಗರಹಟ್ಟಿ ಬಡಾವಣೆಯಲ್ಲಿ ಅಂತರ್ಜಾತಿ ಫೋಕ್ಸೋ ಪ್ರಕರಣದ ಸೇಡಿನ ಜ್ವಾಲೆಯಿಂದ ನೀರಿನಲ್ಲಿ ವಿಷ ಹಾಕಿರುವ ಪ್ರಕರಣದಲ್ಲಿ ದಲಿತ ಕಾಲೋನಿಯ ಜನರ ಸಾವು ನೋವ್ವಿನ ಸಂಖ್ಯೆ ದಿನೇ ದಿನೇ ಏರಿಕೆ ಆಗುತ್ತಲಿದ್ದು, ಇದರಿಂದ ಜನರಲ್ಲಿ ಆತಂಕ ಹೆಚ್ಚಾಗಿದೆ.

ನಿನ್ನೆಯವರೆಗೂ 3 ಜನರ ಪ್ರಾಣ ಕಳೆದುಕೊಂಡಿದ್ದರೆ. ಕಳೆದ ರುದ್ರಪ್ಪ ಹಾಗೂ ಇಂದು ಬೆಳಗ್ಗೆ ಪಾರ್ವತಮ್ಮ ಚಿಕಿತ್ಸೆ ಫಲಕಾರಿಯಾಗದೆ ಪ್ರಾಣ ಬಿಟ್ಟಿದ್ದಾರೆ. ಅಲ್ಲದೆ ನಿನ್ನೆ ದಿನ ವಾಂತಿ, ಭೇದಿಯಿಂದ ಅಸ್ವಸ್ಥತರಾಗಿ ಆಸ್ಪತ್ರೆಗೆ ದಾಖಲಾಗಿದ್ದ 125 ಜನರ ಸಂಖ್ಯೆಯೂ ಕೂಡ ಕಳೆದ ರಾತ್ರಿಯಿಂದ ಇಲ್ಲಿಯವರೆಗೆ 165 ಕ್ಕೆ ಏರಿಕೆಯಾಗಿದೆ.

ಕಲುಷಿತ ನೀರು ಸೇವಿನೆ ದುರಂತ ಪ್ರಕರಣದಲ್ಲಿ 75 ವರ್ಷದ ವಯೋವೃದ್ದ ರುದ್ದಪ್ಪ ಸೋಮವಾರ ಬಸವೇಶ್ವರ ಆಸ್ಪತ್ರೆಗೆ ದಾಖಲಾಗಿದ್ದರು ಅಂದಿನಿಂದಲೂ ಜೀವನ್ಮರಣ ಹೋರಾಟ ಮಾಡುತ್ತಿದ್ದು, ಕಳೆದ ರಾತ್ರಿ ಅಸುನೀಗಿದ್ದಾರೆ.

ವಾಂತಿ, ಭೇದಿಯಿಂದ ಪಾರ್ವತಮ್ಮ ಮನೆಯಲ್ಲಿದ್ದ ಒಂದು ವರ್ಷದ ಮಗು ಸೇರಿದಂತೆ 9 ಜನರು ಜಿಲ್ಲಾ ಸರ್ಕಾರಿ ಆಸ್ಪತ್ರೆ ಹಾಗೂ ಬಸವೇಶ್ವರ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದರು. ಆದರೆ ಪಾರ್ವತಮ್ಮ ಮಾತ್ರ ಮನೆಯಲ್ಲಿದ್ದರು. ಪಾರ್ವತಮ್ಮ ಅವರಿಗೂ ಕೂಡ ಕಳೆದ ರಾತ್ರಿಯಿಂದ ವಾಂತಿ ಭೇದಿಯಾಗಿ ತೀವ್ರ ಅಸ್ವಸ್ಥರಾಗಿದ್ದರು. ಮನೆಯಲ್ಲಿದ್ದ ಕುಟುಂಬಸ್ಥರೆಲ್ಲಾ ಆಸ್ಪತ್ರೆಗೆ ದಾಖಲಾಗಿದ್ದರಿಂದ 75 ವರ್ಷದ ಅಜ್ಜಿ ಪಾರ್ವತಮ್ಮ ಅವರನ್ನು ನೋಡಿಕೊಳ್ಳಲು ಯಾರು ಇಲ್ಲದೆ ಇಂದು ಬೆಳಗ್ಗೆ ಮನೆಯಲ್ಲಿಯೇ ಪ್ರಾಣ ಬಿಟ್ಟಿದ್ದಾರೆ. 5 ಜೀವಗಳ ಪ್ರಾಣಹಾನಿಯಿಂದ ಭಯಭೀತರಾಗಿರುವ ಜನರು ಆತಂಕಕ್ಕಿಡಾಗಿದ್ದಾರೆ.

## ನೀರು ಸಂಗ್ರಹಣೆಯ ತೊಟ್ಟಿಗಳಿಗೆ ಸ್ವಚ್ಚತೆ ಭಾಗ್ಯ

### ಜಿಲ್ಲಾಡಳಿತದಿಂದ ಕವಾಡಿಗರಹಟ್ಟಿ ಮನೆಗಳಿಗೆ ಫುಡ್ ಕಿಟ್ ವಿತರಣೆ

**ಚಿತ್ರದುರ್ಗ** : ಚಿತ್ರದುರ್ಗ ನಗರ ಸಮೀಪದ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಸಾರ್ವಜನಿಕರ ಮರಣ ಹಾಗೂ ಅಸ್ವಸ್ಥರಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಧಿತ ಪ್ರದೇಶದಲ್ಲಿ ಜನರ ಮನೆ ಮನೆಗೆ ಆಹಾರ ಸಾಮಗ್ರಿಗಳ ಫುಡ್ ಕಿಟ್ ಅನ್ನು ವಿತರಿಸಲಾಗುತ್ತಿದ್ದು, ಅಸ್ವಸ್ಥರ ಆರೋಗ್ಯ ಮೇಲ್ವಿಚಾರಣೆ ಹಾಗೂ ಸಲಹೆ ಸೂಚನೆಗಾಗಿ ರಾಜ್ಯ ಮಟ್ಟದಿಂದ ತ್ವರಿತ ಸ್ಪಂದನಾ ತಂಡ (ರ್ಯಾಪಿಡ್ ರೆಸ್ಪಾನ್ಸ್ ಟೀಮ್) ಆಗಮಿಸಿದ್ದು, ಪ್ರಕರಣ ಉಲ್ಬಣಗೊಳ್ಳದಂತೆ ಶೀಘ್ರ ಸಂಪೂರ್ಣ ನಿಯಂತ್ರಣ–ಕ್ಕೆ ಜಿಲ್ಲಾಡಳಿತ ಕ್ರಮ ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರ ಮರಣ ಹಾಗೂ ಅಸ್ವಸ್ಥಗೊಂಡ ಕವಾಡಿಗರ ಹಟ್ಟಿ ಪ್ರದೇಶದಲ್ಲಿ ಜಿಲ್ಲಾಡಳಿತದ ವತಿಯಿಂದ ಮನೆ ಮನೆಗೆ ಆಹಾರ ಸಾಮಗ್ರಿಗಳ ಫುಡ್ ಕಿಟ್‌ಗಳನ್ನು ಈಗಾಗಲೆ ವಿತರಿಸಲಾಗಿದ್ದು, ಊಟ, ತಿಂಡಿಯನ್ನು ಕೂಡ ಪೂ–ರೈಕೆ ಮಾಡಲಾಗುತ್ತಿದೆ. ಉಪವಿಭಾಗಾಧಿಕಾರಿ ಕಾರ್ತಿಕ್ ಹಾಗೂ ತಹಸಿಲ್ದಾರ್ ನಾಗವೇಣಿ ಅವರು ಸ್ಥಳದಲ್ಲಿಯೇ ಉಪಸ್ಥಿತರಿದ್ದು, ಫುಡ್ ಕಿಟ್ ವಿತರಣಾ ಕಾರ್ಯವನ್ನು ಸಮರ್ಪಕವಾಗಿ ಕೈಗೊಂಡಿದ್ದಾರೆ. ಅಸ್ವಸ್ಥರ ಆರೋಗ್ಯ ಮೇಲ್ವಿಚಾರಣೆ ಹಾಗೂ ನಿರ್ವಹಣೆಗಾಗಿ ಉನ್ನತ ಮಟ್ಟದ ವೈದ್ಯರ ತಂಡವನ್ನು ರಾಜ್ಯ ಮಟ್ಟದಿಂದ ಜಿಲ್ಲೆಗೆ ಕಳುಹಿಸಿಕೊಡುವಂತೆ ಜಿಲ್ಲಾಡಳಿತ ಆರೋಗ್ಯ ಇಲಾಖೆಗೆ ಮನವಿ ಮಾಡಿದ ಹಿನ್ನೆಲೆಯಲ್ಲಿ, ಈಗಾಗಲೆ ಜಿಲ್ಲೆಗೆ ತಜ್ಞ ವೈದ್ಯರುಗಳನ್ನು ಒಳಗೊಂಡ ರ್ಯಾಪಿಡ್ ರೆಸ್ಪಾನ್ಸ್ ಟೀಮ್ ಜಿಲ್ಲೆಗೆ ಆಗಮಿಸಿದ್ದು, ಈಗಾಗಲೆ ತಂಡವು ಅಸ್ವಸ್ಥರ ಆರೋಗ್ಯ ಪರಿಸ್ಥಿತಿಯ ಮೇಲ್ವಿಚಾರಣೆ ಹಾಗೂ ಸಲಹೆ ಸೂಚನಾ ಕಾರ್ಯವನ್ನು ಪ್ರಾರಂಭಿಸಿದೆ.



ಪ್ರಕರಣಗಳು ಉಲ್ಬಣಗೊಳ್ಳದಂತೆ ಪರಿಸ್ಥಿತಿಯನ್ನು ಶೀಘ್ರವಾಗಿ ಸಂಪೂರ್ಣ ನಿಯಂತ್ರಣ–ಕ್ಕೆ ಅಗತ್ಯವಿರುವ ಎಲ್ಲ ಕ್ರಮಗಳನ್ನು ಜಿಲ್ಲಾಡಳಿತ ಕೈಗೊಂಡಿದೆ. ಅಲ್ಲದೆ ಮೃತಪಟ್ಟ ಕುಟುಂಬಗಳಿಗೆ ಪರಿಹಾರ ಮೊತ್ತವನ್ನು ಕೂಡ ಸರ್ಕಾರದಿಂದ ಪಾವತಿಸಲು ಈಗಾಗಲೆ ಶಿಫಾರಸು ಸಲ್ಲಿಸಲಾಗಿದೆ. ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡದಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

ಮುಂದಿನ ದಿನಗಳಲ್ಲಿ ಇಂತಹ ಅಹಿತಕರ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಕಟ್ಟುನಿಟ್ಟಿನ ಎಚ್ಚರಿಕೆ ವಹಿಸಲು, ನೀರು ಸಂಗ್ರಹಣಾ ಮೇಲ್ತೊಟ್ಟಿಗಳು, ನೆಲಮಟ್ಟದ ಜಲಸಂಗ್ರಹಾಗಾರಗಳನ್ನು ಸಂಪೂರ್ಣವಾಗಿ ಸ್ವಚ್ಚಗೊಳಿಸಲು ಹಾಗೂ ಸಮರ್ಪಕವಾಗಿ ಕ್ಲೋರಿನೇಷನ್ ಕ್ರಮಗಳನ್ನು ಕೈಗೊಳ್ಳುವಂತೆ ಎಲ್ಲ ನಗರ, ಸ್ಥಳೀಯ ಸಂಸ್ಥೆಗಳು, ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಿಗಳಿಗೆ ತಾಕೀತು ಮಾಡಲಾಗಿದೆ. ಈಗಾಗಲೆ ಚಿತ್ರದುರ್ಗ ನಗರ ವ್ಯಾಪ್ತಿಯ ಎಲ್ಲ 12 ಮೇಲ್ಮಟ್ಟದ ನೀರು ಸಂಗ್ರಹ ತೊಟ್ಟಿಗಳು ಹಾಗೂ 08 ನೆಲಮಟ್ಟದ ಜಲಸಂಗ್ರ ಹಾಗಾರಗಳನ್ನು ಸ್ವಚ್ಚಗೊಳಿಸಲಾಗುತ್ತಿದೆ. ನಗರ ಪ್ರದೇಶ, ಸ್ಲಂ ಪ್ರದೇಶಗಳಲ್ಲಿ ಯಾವುದೇ ಬಗೆಯ ಸಾಂಕ್ರಾಮಿಕ ರೋಗಗಳು ಹರಡ ದಂತೆಯೂ ಎಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಈಗಾಗಲೆ ವೈದ್ಯರು ಹಾಗೂ ಅಧಿಕಾರಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಿದ್ದು, ಸಮಿತಿಯು ಸ್ಥಳ ಪರಿಶೀಲನೆ ನಡೆಸಿ, ಕೈಗೊಂಡಿರುವ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ.



ಕರ್ತವ್ಯ ನಿರ್ಲಕ್ಷ್ಯಕ್ಕಾಗಿ ಚಿತ್ರದುರ್ಗ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಮಂಜುನಾಥ್ ಆರ್ ಗಿರಡ್ಡಿ ಹಾಗೂ ಕಿರಿಯ ಅಭಿಯಂತರ ಎಸ್. ಆರ್. ಕಿರಣ್ ಕುಮಾರ್ ಅವರನ್ನು ಅಮಾನತುಗೊಳಿಸಿ, ಇಲಾಖಾ ವಿಚಾರಣೆಗೆ ಆದೇಶ ಮಾಡುವಂತೆ ಸರ್ಕಾರ–ಕ್ಕೆ ಮಾಡಲಾಗಿದ್ದ ಶಿಫಾರಸ್ಸಿಗೆ ಅನುಗುಣವಾಗಿ ಸರ್ಕಾರ ಈಗಾಗಲೆ ಈ ಇಬ್ಬರು ಇಂಜಿನಿಯರುಗಳನ್ನು ಅಮಾನತುಗೊಳಿಸಿ ಆದೇಶ ಹೊರಡಿಸಿದೆ. ಪರ್ಯಾಯವಾಗಿ, ಆಡಳಿತಾತ್ಮಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಹಿರಿಯೂರು ನಗರಸಭೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಕಾರ್ಯಪಾಲಕ ಅಬಿಯಂತರ ರಾಜು ಕೆ. ಹಾಗೂ ಸಹಾಯಕ ಅಭಿಯಂತರ ಶ್ರೀರಂಗ ಎಂ.ಎಸ್. ಅವರನ್ನು ಚಿತ್ರದುರ್ಗ ನಗರಸಭೆಯಲ್ಲಿ ಕರ್ತವ್ಯ ನಿರ್ವಹಿಸಲು ಪೂರ್ಣ ಪ್ರಮಾಣದಲ್ಲಿ ನಿಯೋಜಿಸಿ ಆದೇಶ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

ಕವಾಡಿಗರ ಹಟ್ಟಿ ಕಲುಷಿತ ನೀರು ಪೂರೈಕೆ ಪ್ರಕರಣದಲ್ಲಿ ಒಹೆಚ್‌ಟಿ ನೀರು ಸಂಗ್ರಹಗಾರದಿಂದ ಸಂಗ್ರಹಿಸಲಾದ ನೀರಿನ ಮಾದರಿಯ ಎಫ್‌ಎಸ್‌ಎಲ್ ಪರೀಕ್ಷಾ ವರದಿ ಬಂದಿದ್ದು, ನೀರಿನಲ್ಲಿ ಯಾವುದೇ ವಿಷಕಾರಿ ಅಂಶಗಳು ಕಂಡುಬಂದಿಲ್ಲ ಎಂಬುದಾಗಿ ವರದಿಯಲ್ಲಿದೆ. ಅಸ್ವಸ್ಥರು ಗುಣಮುಖರಾಗುತ್ತಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಪರಶುರಾಮ್ ಅವರು ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

**ಚಿತ್ರದುರ್ಗ** : ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ.ಕೆ.ಟಿ.ತಿಪ್ಪೇಸ್ವಾಮಿ ಅವರು ಇದೇ ಆಗಸ್ಟ್ 5ರಂದು ಚಿತ್ರದುರ್ಗಕ್ಕೆ ಭೇಟಿ ನೀಡುವರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಆಗಸ್ಟ್ 5ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗಕ್ಕೆ ಆಗಮಿಸಿ, ಕಲುಷಿತ ನೀರಿನ ಸೇವನೆಯ ಪ್ರಕರಣದಲ್ಲಿ ಮಕ್ಕಳ ಆರೋಗ್ಯದ ಪ್ರಸ್ತುತ ಸ್ಥಿತಿಗತಿಯ ಕುರಿತು ವಿಚಾರಣೆ ಮತ್ತು ಪರಿಶೀಲನೆ ನಡೆಸುವರು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು ತಿಳಿಸಿದ್ದಾರಿ

### ಆರೈಎಂಸಿ ಪ್ರವೇಶ ಪರೀಕ್ಷೆ: ಅರ್ಜಿ ಆಹ್ವಾನ

**ಚಿತ್ರದುರ್ಗ** : ಜುಲೈ 2024ನೇ ಸಾಲಿನ ಅಧಿವೇಶನಕ್ಕಾಗಿ 'ಡೆಹರಾಡೂನ್' ನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್‌ನಲ್ಲಿ 8ನೇ ತರಗತಿಗೆ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ 11 1/2 ವರ್ಷದಿಂದ 13 ವರ್ಷದೊಳಗಿರುವ ಬಾಲಕ ಮತ್ತು ಬಾಲಕಿಯರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2023ರ ಡಿಸೆಂಬರ್ 2ರಂದು ನಡೆಸಲಿದ್ದು, ಅಕ್ಟೋಬರ್ 15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ನಿರ್ದೇಶನಾಲಯದ ದೂರವಾಣಿ ಸಂಖ್ಯೆ 080–25589459 ಹಾಗೂ ಜಾಲತಾಣ **www.rimc.gov.in** ಯನ್ನು ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನಲ್ಲಿ ಯಾವುದೇ ವಿಷಕಾರಿ ಅಂಶ ಇಲ್ಲ: ಎಸ್ಪಿ



**ಚಿತ್ರದುರ್ಗ** : ನಗರದ ಹೊರ ವಲಯದ ಕಾವಾಡಿಗರಹಟ್ಟಿಯಲ್ಲಿ ಹಲವು ಬೆಳವಣಿಗೆಗಳಿಗೆ ಸಾಕ್ಷಿಯಾಗಿದ್ದ ಕಲುಷಿತ ನೀರು ಪ್ರಕರಣ–ಕ್ಕೆ ಹೊಸ ಟ್ವಿಸ್ಟ್ ಸಿಕ್ಕಿದೆ. ಜನರು ಕಾಯುತ್ತಿದ್ದ ನೀರು ಸಂಗ್ರಣ ವರದಿಯ ರಿಪೋರ್ಟ್ ನೀಡಿದ್ದು ಮನೆಗಳಿಗೆ ಪೂರೈಕೆಯಾಗಿದ್ದ ನೀರಿನಲ್ಲಿ ಯಾವುದೇ ವಿಷಕಾರಿ ಅಂಶ ಇಲ್ಲ ಎಂದು ತಿಳಿದು ಬಂದಿದೆ. ಓವರ್ ಹೆಡ್ ಟ್ಯಾಂಕ್ ನ ನೀರು ಹಾಗೂ ದೇಹದ ಮಾದರಿಗಳಲ್ಲಿ ಯಾವುದೇ ವಿಷಕಾರಿ ಅಂಶ ಇಲ್ಲ ಎಂದು ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ತಿಳಿಸಿದೆ.

ಕಾವಾಡಿಗರಹಟ್ಟಿಯಲ್ಲಿ ಜು.31 ರಂದು ಪೂರೈಕೆಯಾಗಿದ್ದ ಕಲುಷಿತ ನೀರು ಸೇವಿಸಿ ಐದು ಜನರು ಮೃತಪಟ್ಟು ಹಲವರು ಅಸ್ವಸ್ಥರಾಗಿದ್ದ ಹಿನ್ನೆಲೆಯಲ್ಲಿ ಓವರ್ ಹೆಡ್ ಟ್ಯಾಂಕ್ ನ ನೀರು ಹಾಗೂ ಮೃತರ ದೇಹದ ಮಾದರಿಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು.

ಈ ನಡುವೆ ಬಡಾವಣೆಯಲ್ಲಿ ಒಂದು ವರ್ಷದ ಹಿಂದೆ ನಡೆದಿದ್ದ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ನೀರಗಂಟಿ ದ್ವೇಷ ಭಾವನೆಯಿಂದ ವಿಷ ಬೆರೆಸಿ ದ್ದಾರೆನ್ನುವ ಆರೋಪ ವನ್ನು ಸ್ಥಳೀಯರು ಮಾಡಿದ್ದರು. ಇದೇ ಕಾರಣದ ಹಿನ್ನೆಲೆಯಲ್ಲಿ ಆತನನ್ನು ಬಂಧಿಸಬೇಕು ಎಂದು ಪಟ್ಟು ಹಿಡಿದಿದ್ದರು. ಒತ್ತಡಕ್ಕೆ ಮಣಿದು ಪೊಲೀಸರ ಇಲಾಖೆಯವರು ಕೂಡಾ ನೀರಗಂಟಿಯನ್ನು ಕರೆಸಿ ವಿಚಾರಣೆಯನ್ನು ಸಹ ನಡೆಸಿದ್ದರು. ಮೃತ ಕುಟುಂಬಗಳಿಗೆ ಪರಿಹಾರ ಘೋಷಿಸಲಿಕ್ಕೂ ಇದು ತೊಡಕಾಗಿ ಪರಿಣಮಿಸಿತ್ತು. ಅಂತಿಮವಾಗಿ ಗುರುವಾರ ರಾತ್ರಿ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಹೊರ ಬಂದಿದ್ದು, ಯಾವುದೇ ವಿಷಕಾರಿ ಅಂಶ ಪತ್ತೆಯಾಗಿಲ್ಲ ಎಂದು ಎಸ್ಪಿ ಕೆ. ಪರಶುರಾಂ ಖಚಿತಪಡಿಸಿದ್ದಾರೆ.



**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಉದ್ಯೋಗ ಮೇಳ

**ಚಿತ್ರದುರ್ಗ** : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಮತ್ತು ಡಾನ್ ಬಾಸ್ಕೋ ಪ್ರಥಮ ದರ್ಜೆ ಕಾಲೇಜು ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಇದೇ ಆಗಸ್ಟ್ 5ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಚಿತ್ರದುರ್ಗದ ಚಳ್ಳಕೆರೆ ರಸ್ತೆಯ ಚಿತ್ರ ಡಾನ್ ಬಾಸ್ಕೋ ಸಂಸ್ಥೆ ಆವರಣದಲ್ಲಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ.

ಮೇಳದಲ್ಲಿ 15ಕ್ಕೂ ಹೆಚ್ಚು ವಿವಿಧ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಾಗುವುದು.

ವಿದ್ಯಾರ್ಹತೆ: ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲಮೋ, ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಬಿ.ಎಂ ಮತ್ತು ಇತರೆ ಪದವೀಧರು ಭಾಗವಹಿಸಬಹುದು. 18 ರಿಂದ 30 ವರ್ಷದೊಳಗಿರಬೇಕು.

ದಾಖಲೆಗಳು: ಬಯೋಡಾಟಾ 6 ಪ್ರತಿ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಫೋಟೋಸ್, ಆಧಾರ್ ಕಾರ್ಡ್ ತರಬೇಕು.

ಮೇಳದಲ್ಲಿ ಭಾಗವಹಿಸುವರ ಸಂಸ್ಥೆಗಳು ಖಾಸಗಿ ಸಂಸ್ಥೆಯಾಗಿರುತ್ತದೆ. ಈ ಸಂದರ್ಶನದಲ್ಲಿ ಭಾಗವಹಿಸಲು ಇಚ್ಚಿಸುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಚಿತ್ರದುರ್ಗ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 7022459064, 8105619020, 9945587060 ಗೆ ಸಂಪರ್ಕಿಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸರ್ಕಾರ ಪತನಕ್ಕೆ ಷಡ್ಯಂತ್ರ

**ಬೆಂಗಳೂರು** : ಸರ್ಕಾರ ಪತನಕ್ಕೆ ಸಿಂಗಾಪುರದಲ್ಲಿ ಷಡ್ಯಂತ್ರ ನಡೆದಿದೆ ಎಂಬ ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆಗೆ ಮಾಜಿ ಸಿಎಂ ಕುಮಾರಸ್ವಾಮಿ ತಿರುಗೇಟು ಕೊಟ್ಟಿದ್ದಾರೆ. ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು 'ನಾವು ಕುಟುಂಬ ಸಮೇತ ಪ್ರವಾಸ ಹೋಗಿದ್ದು ಯುರೋಪ್‌ಗೆ ಆದ್ರೆ, ಸರ್ಕಾರ ಕೆಡವಲು ಹೋಗಿದ್ದೇವೆ ಎಂಬ ರೀತಿ ಬಿಂಬಿಸಲಾಗಿದೆ. 19 ಸ್ಥಾನ ಗೆದ್ದ ನಮ್ಮ ಬಗ್ಗೆ ಎಷ್ಟು ಭಯ ಇದೆ ಎಂದು ಅವರ ಹೇಳಿಕೆಯಿಂದ ಗೊತ್ತಾಗುತ್ತದೆ ಎಂದರು.

### ಎಸ್ಸಿ ಮೋರ್ಚಾ ವತಿಯಿಂದ ಪ್ರತಿಭಟನೆ

**ಬೆಂಗಳೂರು** : ಗ್ಯಾರಂಟಿಗಳಿಗೆ ಎಸ್ಸಿ, ಎಸ್ಟಿ ವರ್ಗಗಳ ನಿಧಿ ಬಳಕೆ ವಿಚಾರವಾಗಿ ಇಂದು(ಆ.4) ಸರ್ಕಾರದ ವಿರುದ್ಧ ಬೆಳಗ್ಗೆ 11 ಗಂಟೆಗೆ ಬಿಜೆಪಿ ಎಸ್‌ಸಿ ಮೋರ್ಚಾ ವತಿಯಿಂದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಿದ್ದಾರೆ. ಈ ವೇಳೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಪರಿಷತ್ ಸದಸ್ಯರಾದ ರವಿಕುಮಾರ್, ಚಲವಾದಿ ನಾರಾಯಣ ಸ್ವಾಮಿ, ಬೆಂಗಳೂರು ಜನಪ್ರತಿನಿಧಿಗಳು ಭಾಗಿಯಾಗಲಿದ್ದಾರೆ.

### ಫ್ಲವರ್ ಶೋಗೆ ನಾಲ್ಕು ರಾಜ್ಯಗಳ ಹೂವು

**ಬೆಂಗಳೂರು** : ಫ್ಲವರ್ ಶೋಗೆ ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು ಹಾಗೂ ಆಂಧ್ರಪ್ರದೇಶ ರಾಜ್ಯದಿಂದಲೂ ಹೂವುಗಳನ್ನು ತರಿಸಿಕೊಳ್ಳಲಾಗುತ್ತಿದೆ. ಹೌದು, ಬರೋಬ್ಬರಿ 15 ರಿಂದ 17 ಲಕ್ಷ ಹೂವುಗಳಿಂದ ಕಂಗೊಳಿಸಲಿದೆ. ಇನ್ನು ಫ್ಲವರ್ ಶೋ ವೀಕ್ಷಣೆಗೆ ಬರುವವರಿಗೆ 4 ಕಡೆ ಪಾರ್ಕಿಂಗ್ ವ್ಯವಸ್ಥೆ ಕೂಡ ಮಾಡಲಾಗಿದೆ. ಜೊತೆಗೆ ಟ್ರಾಫಿಕ್ ಹೆಚ್ಚಾಗುವ ದೃಷ್ಟಿಯಿಂದ ಮೆಟ್ರೋ, ಬಸ್ ಬಳಕೆಗೆ ಮಾಡಲು ಮನವಿ ಮಾಡಲಾಗಿದೆ.

### ಫಲಪುಷ್ಪ ಪ್ರದರ್ಶನಕ್ಕೆ ದರ ನಿಗದಿ

**ಬೆಂಗಳೂರು** : ಫಲಪುಷ್ಪ ಪ್ರದರ್ಶನದಲ್ಲಿ ಹಲವು ಕಲೆಗಳ ಸಾರುವ ಉದ್ದೇಶದಿಂದ ಮಕ್ಕಳು, ಮಹಿಳೆಯರಿಗೂ ಕೆಲ ಕಾರ್ಯಕ್ರಮಗಳು ಆಯೋಜನೆ ಮಾಡಲಾಗಿದೆ. ಇನ್ನು ಫಲಪುಷ್ಪ ಪ್ರದರ್ಶನಕ್ಕೆ ಬರುವವರಿಗೆ ವೀಕ್ ಡೇಸ್‌ನಲ್ಲಿ ಹಿರಿಯರಿಗೆ 70 ರೂ ಹಾಗೂ ಮಕ್ಕಳಿಗೆ 30 ರೂ ನಿಗದಿ ಮಾಡಲಾಗಿದೆ. ಜೊತೆಗೆ ಲಾಲ್‌ಬಾಗ್‌ನಲ್ಲಿ ಭದ್ರತೆ ದೃಷ್ಟಿಯಿಂದ 200 ಸಿಸಿಟಿವಿ ಅಳವಡಿಕೆ ಮಾಡಲಾಗಿದ್ದು, 300ರಿಂದ 400 ಭದ್ರತಾ ಸಿಬ್ಬಂದಿ ನಿಯೋಜನೆ ಮಾಡಿ, ಹೆಲ್ತ್ ಕ್ಯಾಂಪ್ ಕೂಡ ವ್ಯವಸ್ಥೆ ಮಾಡಲಾಗಿದೆ.

### ಪೊಲೀಸ್ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

**ದಾವಣಗೆರೆ** : ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಆಗಸ್ಟ್ 9 ರಂದು ಹೊನ್ನಾಳಿ ತಾಲ್ಲೂಕು ಪ್ರವಾಸ ಕೈಗೊಳ್ಳಲಿದ್ದಾರೆ. ಸಾರ್ವಜನಿಕರು ತಮ್ಮ ದೂರುಗಳನ್ನು ಸಲ್ಲಿಸಬಹುದು..

ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಆಗಸ್ಟ್ 9 ರಂದು ಹೊನ್ನಾಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1. ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್.ಕೌಲಾಪೂರೆ ತಿಳಿಸಿದ್ದಾರೆ.

# ಆರೋಗ್ಯ ಇಲಾಖೆಯಿಂದ ಆರೋಗ್ಯ ಶಿಕ್ಷಣ



**ಚಿತ್ರದುರ್ಗ** : ನಗರದ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರು ಅಸ್ವಸ್ಥರಾದ ಪ್ರಕರಣದ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯ ವತಿಯಿಂದ ಕವಾಡಿಗರ ಹಟ್ಟಿ ಪ್ರದೇಶದಲ್ಲಿ ಶುಕ್ರವಾರದಂದು ಸಾರ್ವಜನಿಕರಿಗೆ ಧ್ವನಿವರ್ಧಕದ ಮೂಲಕ ಆರೋಗ್ಯ ಶಿಕ್ಷಣ ನೀಡಲಾಯಿತು.

ಕವಾಡಿಗರ ಹಟ್ಟಿ ಗ್ರಾಮದಲ್ಲಿ ನೀರು ಸೇವನೆಯಿಂದ ಸಾರ್ವಜನಿಕರು ಅಸ್ವಸ್ಥರಾದ ಹಿನ್ನೆಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್ ಅವರ ಮಾರ್ಗದರ್ಶನದಂತೆ ಸಾರ್ವಜನಿಕರಿಗೆ ಮುಂಜಾಗ್ರತಾ ಕ್ರಮಗಳ ಕುರಿತು ಕವಾಡಿಗರ ಹಟ್ಟಿ ಪ್ರದೇಶದಲ್ಲಿ ಧ್ವನಿವರ್ಧಕದ ಮೂಲಕ ಆರೋಗ್ಯ ಶಿಕ್ಷಣ ನೀಡಲಾಯಿತು.

ಮುಂಜಾಗ್ರತಾ ಕ್ರಮಗಳನ್ನು ಸಾರ್ವಜನಿಕರು ಪಾಲಿಸುವುದರಿಂದ, ವಾಂತಿಭೇದಿ ಪ್ರಕರಣಗಳು ಹರಡದಂತೆ ತಡೆಗಟ್ಟಬಹುದಾಗಿದ್ದು, ಊಟ ಮಾಡುವ ಮುನ್ನ, ಶೌಚಾಲಯ ಬಳಕೆ ಮಾಡಿದ ನಂತರ, ಸೋಪಿನಿಂದ ಕೈ–ಕಾಲುಗಳನ್ನು ಚೆನ್ನಾಗಿ ಉಜ್ಜಿ ತೊಳೆದುಕೊಳ್ಳಬೇಕು, ಬಿಸಿ ಬಿಸಿ ಆಹಾರ ಪದಾರ್ಥಗಳನ್ನು ಮಾತ್ರ ಸೇವನೆ ಮಾಡಬೇಕು, ತಂಗಳು ತಡಿಗಳನ್ನ ತಿನ್ನಬಾರದು. ಹಣ್ಣು ತರಕಾರಿಗಳನ್ನ ಉಪ್ಪು ನೀರಿನಿಂದ ತೊಳೆದು ಉಪಯೋಗಿಸಬೇಕು, ಆಹಾರ ಪದಾರ್ಥಗಳ ಮೇಲೆ ನೊಣಗಳು ಕೂರದಂತೆ ಮುಚ್ಚಿಟ್ಟು ಬಳಸಬೇಕು, ಕಾಯಿಸಿ ಆರಿಸಿದ ನೀರನ್ನು ಮಾತ್ರ ಕುಡಿಯಬೇಕು. ಎಲ್ಲೆಂದರಲ್ಲಿ ಬಯಲಿನಲ್ಲಿ ಮಲ, ಮೂತ್ರ ವಿಸರ್ಜನೆ ಮಾಡದೆ ಶೌಚಾಲಯಗಳನ್ನೇ ಬಳಸಬೇಕು. ಶೌಚಾಲಯಗಳ ಸ್ವಚ್ಛತೆ, ಪರಿಸರ ಸ್ವಚ್ಛತೆ, ವಯಕ್ತಿಕ ಸ್ವಚ್ಛತೆ ಕಾಪಾಡಿಕೊಂಡು ಕಾಯಿಸಿ, ಆರಿಸಿದ ಶುದ್ಧ ನೀರನ್ನ ಕುಡಿಯಬೇಕು. ಯಾರಿಗಾದರೂ ವಾಂತಿಭೇದಿ ಆದಲ್ಲಿ ಕವಾಡಿಗರ ಹಟ್ಟಿ ಪ್ರದೇಶದಲ್ಲಿನ ಅಂಗನವಾಡಿ ಕೇಂದ್ರದಲ್ಲಿ ತುರ್ತು ಚಿಕಿತ್ಸಾ ಸೌಲಭ್ಯವನ್ನು ದಿನದ 24 ಗಂಟೆಯೂ ಕಾರ್ಯ ನಿರ್ವಹಿಸುವಂತೆ ತೆರೆಯಲಾಗಿದ್ದು, ಅದರ ಸದ ುಪಯೋಗಪಡಿಸಿಕೊಳ್ಳಬೇಕು. ಯಾರೂ ಕೂಡ ಆತಂಕ ಪಡಬೇಕಾದ ಅವಶ್ಯಕತೆ ಇಲ್ಲ. ವಾಂತಿಭೇದಿ ಪ್ರಕರಣಗಳು ಬಾರದಂತೆ ಕಡಿವಾಣ ಹಾಕಲು ಸಾರ್ವಜನಿಕರು ಸಹಕರಿಸಬೇಕು ಎಂಬುದಾಗಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ಹಾಗೂ ಸಿಬ್ಬಂದಿ ಲಿಂಗೇಶ್ ಅವರ ಮೂಲಕ ಧ್ವನಿವರ್ಧಕದಲ್ಲಿ ಕವಾಡಿಗರ ಹಟ್ಟಿ ಪ್ರದೇಶದಲ್ಲಿ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

# ಸಿದ್ದೇಶ್ ಯಾದವ್ ನುಡಿ ನಮನ ಕಾರ್ಯಕ್ರಮ : ಸಿದ್ದೇಶ್ ಯಾದವ್ ಸ್ನೇಹ ಬಳಗ



**ಚಿತ್ರದುರ್ಗ** : ಸಿದ್ದೇಶ್ ಯಾದವ್ ಸ್ನೇಹ ಬಳಗದ ವತಿಯಿಂದ ಆಗಲಿದ ಚೇತನಕ್ಕೆ ನುಡಿ ನಮನ ಕಾರ್ಯಕ್ರಮವೂ ಇಂದು ಚಳ್ಳಕೆರೆ ಗೇಟ್ ಬಳಿಯ ಎಸ್.ಎಸ್.ಕೆ.ಎಸ್.ಸಮುದಾಯ ಭವನದಲ್ಲಿ ಶನಿವಾರ ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು, ಯಾದವ ಮಹಾ ಸಂಸ್ಥಾನದ ಶ್ರೀ ಕೃಷ್ಣಯಾದವನಂದ ಶ್ರೀಗಳು, ವನಕಲ್ಲು ಮಲ್ಲೇಶ್ವರ ಮಹಾ ಸಂಸ್ಥಾನದ ಶ್ರೀ ಬಸವರಮಾನಂದ ಶ್ರೀಗಳು ಹಾಗೂ ಮಾದಾರ ಚನ್ನಯ್ಯ ಗುರು ಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಎ.ಮುರಳಿ ವಹಿಸಲಿದ್ದಾರೆ.

ಮಾಜಿ ಉಪ ಮುಖ್ಯಮಂತ್ರಿಗಳಾದ ಕೆ.ಎಸ್. ಈಶ್ವರಪ್ಪ, ಕೇಂದ್ರ ಸಚಿವರಾದ ಎ.ನಾರಾಯಣಸ್ವಾಮಿ, ಶಾಸಕರಾದ ಡಾ.ಎಂ.ಚಂದ್ರಪ್ಪ, ಗದಗದ ಗ್ರಾಮೀಣ ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಉಪ ಕುಲಪತಿಗಳಾದ ವಿಷ್ಣುಕಾಂತ ಚಟಪಲ್ಲಿ, ಸಾಮಾಜಿಕ ಕಾರ್ಯಕರ್ತರಾದ ವಾದಿರಾಜ್, ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್, ಕೆ.ಎಸ್.ನವೀನ್, ವೈ.ಎ.ನಾರಾಯಣಸ್ವಾಮಿ, ಚಿದಾನಂದ ಗೌಡ, ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ಎಸ್. ತಿಪ್ಪೇಸ್ವಾಮಿ, ಪೂರ್ಣಿಮಾ, ಬಿಜೆಪಿ ಮುಖಂಡರಾದ ಲಿಂಗಮೂರ್ತಿ ಮತ್ತು ಶಿವಲೀಲಾ ಸಿದ್ದೇಶ್ ಯಾದವ್ ಭಾಗವಹಿಸಲಿದ್ದಾರೆ.

# ಶಿಕ್ಷಕರ ಕಾರ್ಯ ಪ್ರಶಂಸನೀಯ : ಕೆ.ಟಿ.ಕುಮಾರಸ್ವಾಮಿ



**ಚಳ್ಳಕೆರೆ** : ಕಳೆದ ಸುಮಾರು 30 ವರ್ಷಗಳಿಂದ ಚಳ್ಳಕೆರೆ ನಗರ ಶ್ರೀಕಾಟಂಲಿಂಗೇಶ್ವರ ವಿದ್ಯಾಸಂಸ್ಥೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ಇಂದು ಸೇವೆಯಿಂದ ವಯೋನಿವೃತ್ತಿ ಹೊಂದುತ್ತಿರುವ ಎಲ್ಲರ ಮೆಚ್ಚಿನ ಶಿಕ್ಷಕ ಎಸ್.ರಮೇಶ್ ವಿದ್ಯಾಸಂಸ್ಥೆಯ ಬೆಳವಣಿಗೆಗೆ ಹೆಚ್ಚು ಶ್ರಮಿಸಿದ್ದರು ಎಂದು ವಿದ್ಯಾಸಂಸ್ಥೆಯ ಅಧ್ಯಕ್ಷ ಯುವ ರಾಜಕಾರಣಿ ಕೆ.ಟಿ.ಕುಮಾರಸ್ವಾಮಿ ತಿಳಿಸಿದರು.

ಶ್ರೀರೇಣುಕಾ ಯಲ್ಲಮ್ಮದೇವಿ ಸೇವಾ ಸಮಿತಿಯ ಅಧ್ಯಕ್ಷ ತರಕಾರಿ ಮಂಜುನಾಥ, ಕಳೆದ 30 ವರ್ಷಗಳ ಹಿಂದೆ ನಾವು ಶಾಲೆಗೆ ಬರದೆ ದೂರು ಉಳಿದಿದ್ದೇವು. ಆದರೆ, ನಮ್ಮನ್ನು ಶಿಕ್ಷಣ ಕಲಿಯಲು ಪ್ರೇರೇಪಿಸಿದವರೇ ಶಿಕ್ಷಕರ ರಮೇಶ್‌ರವರು. ಬಹುತೇಕ ಎಲ್ಲಾ ವಿದ್ಯಾರ್ಥಿಗಳ ಬಗ್ಗೆ ವಿಶೇಷ ಒಲವು, ವಿಶ್ವಾಸ ಹೊಂದಿದ ಅವರು ವಿದ್ಯಾರ್ಥಿಗಳು ಪ್ರಾಮಾಣಿಕತೆಯಿಂಧ ವಿದ್ಯೆ ಕಲಿಯುವಂತೆ ತಾಕೀತು ಮಾಡಿದ ಪರಿಣಾಮವಾಗಿ ಇಂದು ಈ ಭಾಗದಲ್ಲಿ ವಿದ್ಯಾವಂತರ ಸಂಖ್ಯೆ ಹೆಚ್ಚಿದೆ ಎಂದರು.

ವಯೋನಿವೃತ್ತಿ ಹೊಂದಿದ ಶಿಕ್ಷಕ ಎಸ್.ರಮೇಶ್ ಮಾತನಾಡಿ, ಶಿಕ್ಷಕ ವೃತ್ತಿ ನನ್ನ ಬದುಕಿಗೆ ವಿಶೇಷ ತಿರುವು ನೀಡಿದೆ. ವಿಶೇಷವಾಗಿ ಶ್ರೀಕಾಟಂಲಿಂಗೇಶ್ವರ ವಿದ್ಯಾಸಂಸ್ಥೆಯ ಹಿಂದಿನ ಅಧ್ಯಕ್ಷ, ಮಾಜಿ ಸಚಿವ ದಿವಂಗತ ತಿಪ್ಪೇಸ್ವಾಮಿಯವರ ಮಾರ್ಗದರ್ಶನದಲ್ಲಿ ನಾನು ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ನನಗೆ ತೃಪ್ತಿ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀರೇಣುಕಾ ಯಲ್ಲಮ್ಮದೇವಿ ಸೇವಾ ಸಮಿತಿಯ ಗೌರವಾಧ್ಯಕ್ಷ ವಕೀಲಬೋರಯ್ಯ, ಪ್ರಧಾನ ಕಾರ್ಯದರ್ಶಿ ಡಿ.ಪಿ.ರಾಮದಾಸ್, ಖಜಾಂಚಿ ಗೊಂಚಿಗಾರಬೋರಯ್ಯ, ವಕೀಲ ಕೆ.ಟಿ.ರುದ್ರೇಶ, ದೊರೆಪ್ರಸನ್ನ, ದಳವಾಯಿವೆಂಕಟೇಶ್ ಮುಂತಾದವರು ಉಪಸ್ಥಿತರಿದ್ದರು.

# ತಾಯಿಯ ಎದೆಹಾಲು ಮೊದಲ ಲಸಿಕೆ

**ದಾವಣಗೆರೆ** : ತಾಯಿಯ ಎದೆಹಾಲು ಮಗುವಿಗೆ ಮೊದಲ ಲಸಿಕೆ ಮತ್ತು ಸುರಕ್ಷಿತವಾದದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಜ್‌ಕುಮಾರ್ ರಾಠೋಡ್ ತಿಳಿಸಿದರು.

ಹೊಂಡದ ಸರ್ಕಲ್‌ನಲ್ಲಿರುವ ಶ್ರೀ ದುರ್ಗಾಂಬಿಕಾ ಪ್ರೌಢಶಾಲೆಯಲ್ಲಿ ಜರುಗಿದ ಜಿಲ್ಲಾ ಮಟ್ಟದ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಮಗು ಜನಿಸಿದ 1 ಗಂಟೆಯೊಳಗೆ ಸ್ತನ್ಯಪಾನ ಮಾಡಿಸುವುದರಿಂದ ಶಿಶು ಮರಣವನ್ನು ಕಡಿಮೆ ಮಾಡಬಹುದು. ಮೊದಲ 6 ತಿಂಗಳು ಮಗುವಿಗೆ ಕೇವಲ ಎದೆ ಹಾಲನ್ನು ಮಾತ್ರ ನೀಡಬೇಕು, ನಂತರ ಪೂರಕ ಪೌಷ್ಠಿಕ ಆಹಾರವನ್ನು ನೀಡಬೇಕು ಎಂದು ತಿಳಿಸಿದರು.

ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್.ಜಿ.ಎಸ್ ಮಾತನಾಡಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಆಗಸ್ಟ್ 1 ರಿಂದ 7 ರವರೆಗೆ ಕೇಂದ್ರಗಳಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಹಮ್ಮಿಕೊಂಡು ಗರ್ಭಿಣಿ ಮತ್ತು ಬಾಣಂತಿಯರಿಗೆ ಸ್ತನ್ಯಪಾನದ ಉದ್ದೇಶ ಹಾಗೂ ಮಹತ್ವದ ಬಗ್ಗೆ ತಿಳಿಸಬೇಕು ಎಂದರು.

ತಾಲ್ಲೂಕು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ನೇತ್ರಾವತಿ ಮತ್ತು ಶಿಶು ಅಭಿವೃದ್ಧಿ ಯೋಜನೆಯ ಮೇಲ್ವಿಚಾರಕಿಯರು ಹಾಗೂ ನಗರ ಪ್ರದೇಶದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಗರ್ಭಿಣಿ ಹಾಗೂ ಬಾಣಂತಿಯರು ಉಪಸ್ಥಿತರಿದ್ದರು.

# ಮೃತರ ಕುಟುಂಬಕ್ಕೆ ಪರಿಹಾರಕ್ಕೆ ಕ್ರಮ : ಕೇಂದ್ರ ಸಚಿವ



**ಚಿತ್ರದುರ್ಗ** : ಕವಾಡಿಗರಹಟ್ಟಿ ಪ್ರಕರಣ–ಕ್ಕೆ ಸಂಬಂಧಿಸಿದಂತೆ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಆಧರಿಸಿ ತಕ್ಷಣವೇ ಮೃತರ ಕುಟುಂಬಕ್ಕೆ ಪರಿಹಾರ ನೀಡಲು ಕ್ರಮ ವಹಿಸಲಾಗುವುದು ಎಂದು ಕೇಂದ್ರ ಸಚಿವರು ಹಾಗೂ ಚಿತ್ರದುರ್ಗ ಸಂಸದರಾದ ಎ.ನಾರಾಯಣಸ್ವಾಮಿ ಹೇಳಿದರು.

ಚಿತ್ರದುರ್ಗ ಜಿಲ್ಲಾಸ್ಪತ್ರೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಯುರಾಲಜಿ ವಿಭಾಗ ಹಾಗೂ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಆರೋಗ್ಯ ವಿಚಾರಿಸಿ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಕವಾಡಿಗರ ಹಟ್ಟಿ ಘಟನೆಯ ಕುರಿತು ಅಧಿಕಾರಿಗಳು ಹಾಗೂ ವೈದ್ಯರೊಂದಿಗೆ ಸಭೆ ನಡೆಸಿ ಚರ್ಚಿಸುತ್ತೇನೆ. ಸಾರ್ವಜನಿಕರು ಮಾಡಿರುವ ಆರೋಪಗಳ ಕುರಿತು ಸರ್ಕಾರದೊಂದಿಗೆ ಮಾತನಾಡಿ ಉನ್ನತ ಮಟ್ಟದ ತನಿಖೆ ನಡೆಸಲಾಗುವುದು. ದುರ್ಘಟನೆಯ ಹಿಂದೆ ಯಾರದಾದರೂ ಕೈವಾಡ ಇದೆಯಾ ಅಥವಾ ಶಾಂತಿ ಸಾಗರದಿಂದ ನೀರು ಸರಬರಾಜು ವೇಳೆಯಲ್ಲಿ ಎಲ್ಲಾದರೂ ಲೋಪವಾಗಿದೆಯೇ ಎಂಬುದನ್ನು ಪರಿಶೀಲಿಸಲು ತಂಡವನ್ನು ರಚಿಸಲಾಗುವುದು. ಜಿಲ್ಲೆಯ ಎಲ್ಲೂ ಕೂಡ ಈ ರೀತಿ ಘಟನೆ ನಡೆಯದಂತೆ ಮುಂಜಾಗೃತೆ ವಹಿಸಿ ಎಲ್ಲಾ ಕುಡಿಯುವ ನೀರಿನ ಮೂಲಗಳ ವರದಿಯನ್ನು ವಾರದ ಒಳಗೆ ತರಿಸಿಕೊಳ್ಳಲಾಗುವುದು ಎಂದರು.

ಕವಾಡಿಗರಹಟ್ಟಿ ಘಟನೆಯ ಬಗ್ಗೆ ಮಾಧ್ಯಮದಲ್ಲಿ ವರದಿ ಬಂದ ತಕ್ಷಣವೇ ಜಿಲ್ಲಾಧಿಕಾರಿಗಳಿಗೆ ಕರೆ ಮಾಡಿ ಪ್ರಾಥಮಿಕ ಮಾಹಿತಿ ಪಡೆದುಕೊಳ್ಳಲಾಗಿದೆ. ಮರುಕ್ಷಣವೇ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಡಿಹೆಚ್‌ಓಗೂ ಕರೆ ಮಾಡಿ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದ್ದೆ. ಅಧಿಕಾರಿಗಳು ಘಟನೆಗೆ ತಕ್ಷಣ ಸ್ಪಂದಿಸಿ, ಮಕ್ಕಳು, ವೃದ್ದರೂ ಸೇರಿದಂತೆ ಎಲ್ಲರಿಗೂ ಉತ್ತಮ ಚಿಕಿತ್ಸೆ ನೀಡಿದ್ದಾರೆ.

ಇದುವರೆಗೂ ಘಟನೆಯಲ್ಲಿ 5 ಜನರು ಮೃತಪಟ್ಟಿದ್ದಾರೆ. ನಿನ್ನೆ ಬಂದ ನೀರಿನ ಮಾದರಿಗಳ ವಿಧಿ ವಿಜ್ಞಾನ ವರದಿಯು ಸಹ ಕುಡಿಯುವ ನೀರಿಗೆ ಯಾವುದೇ ವಿಷವಿಲ್ಲ ಎಂದು ತಿಳಿದಿದೆ. ಆದರೂ ಸಾರ್ವಜನಿಕರ ದೂರನ್ನು ಪರಿಗಣನೆಗೆ ತೆಗೆದುಕೊಂಡು ಮೃತರ ಮರಣೋತ್ತರ ಪರೀಕ್ಷೆ ನಡೆಸಲು ಸೂಚಿಸಿದ್ದೇನೆ. ಮರಣೋತ್ತರ ಪರೀಕ್ಷೆಯಲ್ಲಿ ಸಾವಿನ ಕಾರಣ ತಿಳಿದು ಬರಲಿದೆ. ನೀರಿನ ಮಾದರಿಯ ವಿಧಿ ವಿಜ್ಞಾನ ವರದಿ ಹಾಗೂ ಮರಣೋತ್ತರ ಪರೀಕ್ಷೆ ವರದಿಗಳನ್ನು ಪರಿಶೀಲಿಸಿ ಮುಂದಿನ ಅಂಶಗಳನ್ನು ಚರ್ಚಿಸಲಾಗುವುದು. ಇದರ ಮೇಲೆಯೂ ನೀರಿನ ಕಲುಷಿತಕ್ಕೆ ಕಾರಣ ಕಂಡುಹಿಡಿದು ವರದಿ ನೀಡಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದೇನೆ.

ಆಸ್ಪತ್ರೆಗೆ ದಾಖಲಾಗುವವರ ಸಂ–ಖ್ಯೆ ಹೆಚ್ಚಾಗಿದ್ದರಿಂದ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ, ಅಸ್ವಸ್ಥರ ಮೇಲೆ ನಿಗಾ ವಹಿಸಲು ಹಾಗೂ ಘಟನೆಯ ಕಾರಣಗಳನ್ನು ವಿಶ್ಲೇಷಿಸಲು ರಾಜ್ಯ ಮಟ್ಟದಿಂದ ತಜ್ಞರ ಸಮಿತಿ ಕರೆಸಲು ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಪತ್ರ ಬರೆದಿದ್ದರು. ಇದರಂತೆ ಸರ್ಕಾರ ತಜ್ಞರ ಸಮಿತಿ ನೇಮಿಸಿ ಜಿಲ್ಲೆಗೆ ಕಳುಹಿಸಿಕೊಟ್ಟಿದೆ ಎಂದರು.

ಸಾರ್ವಜನಿಕರು ಯಾವುದೇ ಕಾರಣ–ಕ್ಕೂ ಆತಂಕ ಪಡುವ ಅಗತ್ಯವಿಲ್ಲ. ಜಿಲ್ಲಾಡಳಿತ ಸದಾ ಕಾಲ ನಿಮ್ಮ ಸೇವೆಗೆ ಸಿದ್ದವಿದೆ. ಸಂಸತ್ ಅಧಿವೇಶನದಲ್ಲಿ ನನ್ನ ಇಲಾಖೆಗೆ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರ ನೀಡಬೇಕಾಗಿತ್ತು. ಸಂಸತ್ ನಡೆಯುವ ವೇಳೆಯಲ್ಲಿ ಲೋಕಸಭಾಧ್ಯಕ್ಷರ ಅನುಮತಿ ಮೇರೆಗೆ ನಾನು ಮರಳಿ ಬರಬೇಕಾದ್ದರಿಂದ ಘಟನೆ ನಡೆದ ತಕ್ಷಣವೇ ಬಂದು ಭೇಟಿ ಮಾಡಲು ಸಾಧ್ಯವಾಗಲಿಲ್ಲ ಎಂದು ಇದೇ ವೇಳೆ ಸ್ಪಷ್ಟ ಪಡಿಸಿದರು.

ಈ ಸಂದರ್ಭದಲ್ಲಿ ಮಾದಾರ ಚನ್ನಯ್ಯ ಗುರುಪೀಠದ ಮಾದಾರ ಚನ್ನಯ್ಯ ಸ್ವಾಮೀಜಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪರಶುರಾಮ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ರಂಗನಾಥ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಹೆಚ್.ಬಸವರಾಜ್ ಇದ್ದರು.

## ಫಾಸ್ಟ್ ನ್ಯೂಸ್

### ಸಚಿವ ದಿನೇಶ್ ಗುಂಡೂರಾವ್ ಜಿಲ್ಲಾ ಪ್ರವಾಸ



**ಚಿತ್ರದುರ್ಗ** : ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವರಾದ ದಿನೇಶ್ ಗುಂಡೂರಾವ್ ಅವರು ಆ. 05 ರಂದು ಚಿತ್ರದುರ್ಗ ಜಿಲ್ಲೆಗೆ ಆಗಮಿಸಲಿದ್ದಾರೆ.

ಸಚಿವರು ಅಂ–ದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು ಬೆ. 10.30 ಗಂಟೆಗೆ ಚಿತ್ರದುರ್ಗ–ಕ್ಕೆ ಆಗಮಿಸುವರು. ಬಳಿಕ ಕವಾಡಿಗರ ಹಟ್ಟಿಗೆ ತೆರಳಿ ಕಲುಷಿತ ನೀರು ದುರಂತಲ್ಲಿ ಸಾವನ್ನಪ್ಪಿದ ಕುಟುಂಬದವರ ಮನೆಗಳಿಗೆ ಭೇಟಿ ನೀಡುವರು. ನಂತರ ಬಸವೇಶ್ವರ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಕಲುಷಿತ ನೀರು ಪ್ರಕರಣದಲ್ಲಿ ಅಸ್ವಸ್ಥಗೊಂಡು ಚಿಕಿತ್ಸೆ ಪಡೆಯುತ್ತಿರುವವರ ಆರೋಗ್ಯ ವಿಚಾರಿಸುವರು. ಸಚಿವರು ಬಳಿಕ ಬೆಂಗಳೂರಿಗೆ ಹಿಂದಿರುಗುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ

**ಚಳ್ಳಕೆರೆ** : ತಾಲ್ಲೂಕು ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ ಮಾದಿಗ ಸಮುದಾಯದ ವಿದ್ಯಾರ್ಥಿಗಳಿಗೆ ಹೆಚ್ಚು ಪ್ರೋತ್ಸಾಹ ನೀಡುವುದಲ್ಲದೆ, ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಲು ಪ್ರತಿಭಾಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಡಿ.ದಯಾನಂದ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ವತಿಯಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.85, ದ್ವಿತೀಯ ಪಿಯುಸಿಯಲ್ಲಿ ಶೇ.75ರಷ್ಟು(2023ರ ಪರೀಕ್ಷೆ) ಅಂಕ ಪಡೆದವರಿಗೆ ಪ್ರತಿಭಾಪುರಸ್ಕಾರ ನೀಡಲು ಸಿದ್ದತೆಗಳು ನಡೆದಿದ್ದು, ವಿದ್ಯಾರ್ಥಿಗಳು ಅಂಕಪಟ್ಟಿ, ಜಾತಿಪ್ರಮಾಣ ಪತ್ರ, ಒಂದು ಪಾಸ್‌ಪೋರ್ಟ್ ಪೋಟೋವನ್ನು ಆಗಸ್ಟ್ 16ರೊಳಗೆ ಡಿ.ದಯಾನಂದ 97311 97815, ಡಿ.ಟಿ.ಹನುಮಂತರಾಯ 98454 35847, ಎಚ್.ಹನುಮಂತಪ್ಪ 99804 48871, ನೀಲಕಂಠಪ್ಪ 99727 32899ರವರನ್ನು ಸಂಪರ್ಕಿಸಿ ನೀಡಲು ಕೋರಲಾಗಿದೆ. ನಿಗದಿತ ದಿನಾಂಕದೊಳಗೆ ಮಾಹಿತಿ ಕಳುಹಿಸಿ ಕಾರ್ಯಕ್ರಮದ ಯಶಸ್ವಿಗೆ ವಿದ್ಯಾರ್ಥಿಗಳು ಪೋಷಕರು ಹಾಗೂ ಸಮುದಾಯದ ಬಂಧುಗಳು ಕೈಜೋಡಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

### ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ

**ದಾವಣಗೆರೆ** : ಹರಿಹರದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಎ.ಇ.ಸಿ.ಟಿ.ಇ ಯಿಂದ ಅನುಮೋದನೆಗೊಂಡ 2023–24 ನೇ ಸಾಲಿನ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಮತ್ತು ಡಿಪ್ಲೊಮಾ ಇನ್ ಆಟೋಮೇಷನ್ ಅಂಡ್ ರೋಬೋಟಿಕ್ಸ್ ಕೋರ್ಸ್‌ಗೆ ಎಸ್.ಎಸ್.ಎಲ್.ಸಿ ತೇರ್ಗಡೆಯಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಮತ್ತು ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಪ್ರಾಂಶುಪಾಲರು, 22 ಸಿ ಮತ್ತು ಡಿ. ಕೆ.ಐ.ಎ.ಡಿ.ಬಿ, ಕೈಗಾರಿಕಾ ಪ್ರದೇಶ ಹರ್ಲಾಪುರ, ಹರಿಹರ–577601 ಈ ವಿಳಾಸಕ್ಕೆ ಅಥವಾ ಮೊ. ನಂ: 9845941245/8711913947 ಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಚಾರಿ ದಂಡದಲ್ಲಿ ಶೇ 50 ರಷ್ಟು ರಿಯಾಯಿತಿ

**ದಾವಣಗೆರೆ** : ಸರ್ಕಾರದ ಆದೇಶದನ್ವಯ ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ಶೇಕಡ 50 ರಷ್ಟು ರಿಯಾಯಿತಿ ನೀಡಲಾಗುತ್ತದೆ.

ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ನಲ್ಲಿ 2023 ರ ಫೆಬ್ರವರಿ 11 ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ರಿಯಾಯಿತಿ ನೀಡಲಾಗುತ್ತಿದ್ದು, ಸೆಪ್ಟೆಂಬರ್ 9 ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಇದು ಅನ್ವಯಿಸುತ್ತದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ಮಹಾವೀರ ಎಂ. ಕರೆಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೈಕ್ ಪಲ್ಟಿ ಗ್ರಾ.ಪಂ. ಸದಸ್ಯೆ ಸಾವು



**ಚಳ್ಳಕೆರೆ:** ತಾಲ್ಲೂಕಿನ ತಳಕು ಠಾಣಾ ವ್ಯಾಪ್ತಿಯ ಬಂಜಿಗೆರೆ, ಘಟಪರ್ತಿ ರಸ್ತೆಯಲ್ಲಿ ಮೋಟಾರ್ ಬೈಕ್ ಪಲ್ಟಿಯಾಗಿ ಬೈಕ್ ಹಿಂಬದಿ ಕುಳಿತಿದ್ದ ಘಟಪರ್ತಿ ಗ್ರಾಮ ಪಂಚಾಯಿತಿ ಸದಸ್ಯೆ ತಿಪ್ಪಕ್ಕ(42) ಗಾಯಗೊಂಡು ಬೇಡರೆಡ್ಡಿಹಳ್ಳಿ ಪ್ರಾಥಮಿಕ ಕ್ಷೇತ್ರದಲ್ಲಿ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತೆ–ಗಾಗಿ ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆಗೆ ಕರೆತರುವ ಸಂದರ್ಭದಲ್ಲಿ ಮಾರ್ಗಮಧ್ಯದಲ್ಲೇ ಮೃತಪಟ್ಟಿರುತ್ತಾರೆ.

ಮೃತ ತಿಪ್ಪಕ್ಕ ಬಂಜಿಗೆರೆಯಿಂದ ಘಟಪರ್ತಿ ಕಡೆಗೆ ಅಜ್ಜನಹಳ್ಳಿಯ ಓಬಣ್ಣ ಎಂಬುವವರ ಮೋಟಾರ್ ಬೈಕ್‌ನಲ್ಲಿ ಹಿಂಬದಿ ಕುಳಿತು ಬರುತ್ತಿರುವ ಸಂದರ್ಭದಲ್ಲಿ ಬೈಕನ್ನು ವೇಗವಾಗಿ ಓಡಿಸುವಾಗ ಪಲ್ಟಿಯಾಗಿ ಈ ಅವಘಡ ಸಂಭವಿಸಿದೆ. ತಳಕು ಪಿಎಸ್‌ಐ ಗಾದಿಲಿಂಗಪ್ಪ ಪ್ರಕರಣ ದಾಖಲಿಸಿದ್ದಾರೆ. ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಕಲ್ಯಾಣ ಯೋಜನೆಗಳಿಗೆ ಪ್ರಚಾರ ಬಹಳ ಪ್ರಮುಖ : ರಾಜೇಶ್ವರಿ ಎನ್.ಹೆಗಡೆ

**ನಮ್ಮ ಜನ ವಾರ್ತೆ ದಾವಣಗೆರೆ** : ಸರ್ಕಾರ ಹಲವು ಇಲಾಖೆಗಳ ಮೂಲಕ ಸಾಕಷ್ಟು ಜನಕಲ್ಯಾಣ ಯೋಜನೆಗಳನ್ನು ಜಾರಿಗೆ ತಂದಿದ್ದು ಇವುಗಳು ಅರ್ಹರಿಗೆ ತಲುಪಿಸುವಲ್ಲಿ ಪ್ರಚಾರದ ಕೆಲಸವು ಅಷ್ಟೆ ಪ್ರಮುಖವಾದದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು.

ಅವರು ಆಗಸ್ಟ್ 3 ರಂದು ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ವಿವಿಧ ಇಲಾಖೆಗಳಿಂದ ಅನುಷ್ಠಾನ ಮಾಡಲಾಗುತ್ತಿರುವ ಯೋಜನೆಗಳು ಮತ್ತು ಪ್ರಾಧಿಕಾರದಿಂದ ಮುಂದಿನ ಎರಡು ತಿಂಗಳಲ್ಲಿ ಕೈಗೊಳ್ಳಬೇಕಾದ ಕಾರ್ಯಕ್ರಮ ರೂಪುರೇಷೆಗಳ ಕುರಿತ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದರು.

ಸಮಾಜ ಕಲ್ಯಾಣ ಇಲಾಖೆ, ಕೃಷಿ, ತೋಟಗಾರಿ–ಕೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ನರೇಗಾ, ಎನ್.ಆರ್.ಎಲ್.ಎಂ, ಕಾರ್ಮಿಕ ಇಲಾಖೆ, ಬಿಸಿಎಂ, ಸಾಮಾಜಿಕ ಭದ್ರತಾ ಯೋಜನೆಗಳು ಸೇರಿದಂತೆ ಅನೇಕ ಇಲಾಖೆಗಳಿಂದ ಸಾಕಷ್ಟು ಯೋಜನೆಗಳನ್ನು ಅನುಷ್ಟಾನ ಮಾಡಲಾಗುತ್ತಿದೆ. ಆದರೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಈ ಯೋಜನೆಗಳು ಸಿಗಬೇಕೆನ್ನುವುದು ಕಾನೂನು ಸೇವಾ ಪ್ರಾಧಿಕಾರದ ಗುರಿಯಾಗಿದೆ, ಈ ನಿಟ್ಟಿನಲ್ಲಿ ಪ್ರಾಧಿಕಾರ ಪರಿಶೀಲನೆ ನಡೆಸಲಿದೆ ಎಂದರು.

**ಯೋಜನೆಗಳ ಕೈಪಿಡಿ ರೂಪಿಸಿ** : ಇಲಾಖೆಗಳಿಂದ ಅನುಷ್ಠಾನ ಮಾಡಲಾಗುತ್ತಿರುವ ಯೋಜನೆಗಳ ರೂಪುರೇಷೆಗಳ ಕುರಿತಂತೆ ಯೋಜನೆಗಳ ಹೆಸರು, ಅರ್ಹತೆ, ಸೌಲಭ್ಯಗಳು, ಪಡೆಯುವ ಮಾನದಂಡಗಳೇನು ಎನ್ನುವ ಬಗ್ಗೆ ಕೈಪಿಡಿಯನ್ನು ಸಿದ್ದಪಡಿಸಿಕೊಂಡು ಸಾರ್ವಜನಿಕರಿಗೆ ನೀಡುವ ಕೆಲಸವನ್ನು ಮಾಡಬೇಕೆಂದರು.

**ಪ್ರಕೃತಿ ವಿಕೋಪ ತಡೆಗೆ ಮುನ್ನೆಚ್ಚರಿಕೆ** : ಪ್ರಕೃತಿ



ವಿಕೋಪ ಪರಿಸ್ಥಿತಿಗಳು ಸಂಭವಿಸಿದಾಗ ತಕ್ಷಣಾ ಸ್ಪಂದಿಸುವ ತಂಡ ಮತ್ತು ಪ್ರಕೃತಿ ವಿಕೋಪಗಳನ್ನು ತಡೆಯಲು ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಜನರೊಂದಿಗೆ ಮಾಹಿತಿ ಸಂವಹನ ಕ್ರಮಗಳನ್ನು ಅನುಸರಿಸಬೇಕು. ಮತ್ತು ಸಾಂಕ್ರಾಮಿಕ ರೋಗಗಳು ಹರಡದಂತೆ ಕ್ರಮಗಳು ಮತ್ತು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿ ಪಾಲಿಕೆಯಿಂದ ಸ್ವಚ್ಚತೆಕಡೆಗೆ ಹೆಚ್ಚಿನ ಗಮನ ಹರಿಸಿ ಮಳೆಗಾಲವಾಗಿರುವುದರಿಂದ ಡೆಂಗ್ಯೂ, ಚಿಕನ್‌ಗುನ್ಯ ಹರಡದಂತೆ ಕ್ರಮ ವಹಿಸಲು ಸೂಚನೆ ನೀಡಲಾಯಿತು.

**ಗ್ರಾಮೀಣ ಪ್ರದೇಶದಲ್ಲಿ ಕಾನೂನು ಸೇವಾ ಕಾರ್ಯಕ್ರಮ** : ಸೆಪ್ಟೆಂಬರ್ 9 ರಂದು ದಾವಣಗೆರೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬೃಹತ್ ಲೋಕ್ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ ಮುಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ಹೆಚ್ಚು ಕಾನೂನು ಸೇವಾ ಮತ್ತು ಅರಿವು ಕಾರ್ಯಕ್ರಮಗಳನ್ನು ಏರ್ಪಡಿಸಲು ಉದ್ದೇಶಿಸಲಾಗಿದೆ. ಮಾದಕ ವಸ್ತುಗಳಿಂದ ಯುವ ಜನರನ್ನು ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಶಾಲಾ, ಕಾಲೇಜುಗಳಲ್ಲಿ ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ ಎಂದರು.

ಸಭೆಯಲ್ಲಿ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ ಮ.ಕರಣ್ಣವರ ವಿವಿಧ ಇಲಾಖೆಗಳಲ್ಲಿ ರೂಪಿಸಲಾದ ಕ್ರಿಯಾ ಯೋಜನೆಗಳ ಮಾಹಿತಿ ಮತ್ತು ಅನುಷ್ಟಾನ ಮಾನದಂಡಗಳ ಬಗ್ಗೆ ಮಾಹಿತಿ ಪಡೆದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಮುಖ್ಯ ನ್ಯಾಯಿಕ ದಂಡಾಧಿಕಾರಿ ಶಿವಪ್ಪ ಸಲಗೇರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಸರ್ಕಾರಿ ಅಭಿಯೋಜಕ ಇಲಾಖೆ ಉಪನಿರ್ದೇಶಕಿ ಕಲ್ಪನಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ನಾಗರಾಜ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೊಟ್ರೇಶ್, ಜಿಲ್ಲಾ ಸರ್ಕಾರಿ ವಕೀಲರಾದ ನವೀನ್, ಚಿಗ–ಟೇರಿ ಆಸ್ಪತ್ರೆ ಸರ್ಜನ್ ಡಾ;ಸುಭಾಷ್, ಸಮಿತಿ ಸದಸ್ಯರಾದ ರೂಪಾನಾಯ್ಕ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಶಿಕ್ಷಣ ಬಗ್ಗೆ ಹೆಚ್ಚು ಜಾಗೃತರಾಗಬೇಕು : ಎಸ್.ಸಾಗರ್

**ಚಳ್ಳಕೆರೆ** : ಗ್ರಾಮೀಣ ಭಾಗಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಾತ್ಮಕ ಶಿಕ್ಷಣವನ್ನು ನೀಡಿ ಅವರು ಬದುಕಿನ ಸಾರ್ಥಕತೆಯತ್ತ ಹೆಜ್ಜೆ ಇಡಲು ಪ್ರೇರಕ ಶಕ್ತಿ ನೀಡುವವರು ಶಿಕ್ಷಕರು. ಪ್ರಸ್ತುತ ಇಂದಿನ ಶಿಕ್ಷಣ ಇಲಾಖೆಯ ನೂತನ ನಿಯಮಗಳ ನಡುವೆಯೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗದಂತೆ ಕಾರ್ಯನಿರ್ವಹಿಸುವ ಶಿಕ್ಷಕರು ಸಿಗುವುದು ವಿರಳ. ಗ್ರಾಮದ ರೇಣುಕಾದೇವಿ ಸ್ವಾತಂತ್ರ್ಯ ಪದವಿ ಪೂರ್ವ ಕಾಲೇಜಿನ ಇತಿಹಾಸ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಟಿ.ಎಲ್.ಲಕ್ಷ್ಮಿನಾರಾಯಣ, ದೈಹಿಕ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಬಿ.ಇ.ಬಸವರಾಜಪ್ಪ ಸೇವೆ ಶ್ಲಾಘನೀಯ ಎಂದು ಆಂಜನೇಯ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಎಸ್.ಸಾಗರ ತಿಳಿಸಿದರು.

ಅವರು, ತಮ್ಮ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಪ್ರಾಂಶುಪಾಲರು, ದೈಹಿಕ ಶಿಕ್ಷಕರನ್ನು ವಿದ್ಯಾರ್ಥಿಗಳು, ಪೋಷಕರು ಹಾಗೂ ಸಂಸ್ಥೆಯ ಪರವಾಗಿ ಸನ್ಮಾನಿಸಿ, ಅಭಿನಂದಿಸಿ ಮಾತನಾಡಿದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿರ್ಗಮನ ಪ್ರಾಂಶುಪಾಲ ಟಿ.ಎಲ್.ಲಕ್ಷ್ಮಿವೆಂಕಟೇಶಲು, ಕಳೆದ 32 ವರ್ಷಗಳಿಂದ ತಾಲ್ಲೂಕಿನ ಗಡಿಭಾಗದ ಕಾಲೇಜಿನಲ್ಲಿ ಸೇವೆ ಸಲ್ಲಿಸಿದ್ದೇನೆ. ಈ ಭಾಗದ ಬಹುತೇಕ ಅಧಿಕಾರಿಗಳು, ಸಿಬ್ಬಂದಿ, ಚುನಾಯಿತ ಜನಪ್ರತಿನಿಧಿಗಳು, ಉದಯೋನ್ಮುಖ ಬರಹಗಾರರು ಇದೇ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದ್ದಾರೆ. ನಾನು ಉತ್ತಮ ಸೇವೆ ಸಲ್ಲಿಸಿದ್ದೇನೆಂದರೆ ಅದಕ್ಕೆ ಮೂಲ ಕಾರಣ ಈ ಸಂಸ್ಥೆಯ ಆಡಳಿತ ಮಂಡಳಿ, ಸಾರ್ವಜನಿಕರು, ಸಿಬ್ಬಂದಿ ವರ್ಗ ಹಾಗೂ ನಮ್ಮ ವಿದ್ಯಾರ್ಥಿಗಳು. ಪ್ರತಿಯೊಬ್ಬ ವಿದ್ಯಾರ್ಥಿಯೂ ಹೆಚ್ಚು ಪರಿಶ್ರಮದಿಂದ



**ಚಳ್ಳಕೆರೆ ತಾಲ್ಲೂಕಿನ ರೇಣುಕಾಪುರ ರೇಣುಕಾದೇವಿ ಸ್ವಾತಂತ್ರ್ಯ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಟಿ.ಎಲ್.ಲಕ್ಷ್ಮಿನಾರಾಯಣ, ದೈಹಿಕ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಬಿ.ಇ.ಬಸವರಾಜಪ್ಪ ಬೀಳ್ಕೊಡಿಗೆ ಸಮಾರಂಭದಲ್ಲಿ ಸನ್ಮಾನಿಸಲಾಯಿತು.**

ಅಭ್ಯಾಸ ಮಾಡಿ ಪ್ರಗತಿ ಹೊಂದಲಿ ಎಂದು ಶುಭಹಾರೈಸುವೆ ಎಂದರು.

ಈ ಸಂದರ್ಭದಲ್ಲಿ ಪ್ರಭಾರ ಪ್ರಾಂಶುಪಾಲ ಯರ‍್ರಿಸ್ವಾಮಿ, ನಿವೃತ್ತ ಉಪನ್ಯಾಸಕ ರಾಜಣ್ಣ, ಚಂದ್ರಶೇಖರ್, ಪೀತಾಂಬರ್, ಮಂಜನಾಯ್ಕ, ನಾಗರಾಜು, ಮಹಲಿಂಗಪ್ಪ, ವೆಂಕಟೇಶ್‌ಬಾಬು, ಮಾರುತಿ ಮುಂತಾದವರು ಉಪಸ್ಥಿತರಿದ್ದರು.

# ಶುದ್ಧ ಕುಡಿಯುವ ನೀರು ಪೂರೈಕೆ ಪುರಸಭೆ ಒತ್ತು



**ಹೊಳಲ್ಕೆರೆ** : ಪಟ್ಟಣಕ್ಕೆ ಪೂರೈಕೆಯಾಗುವ ನೀರಿನ ಪರೀಕ್ಷೆಯನ್ನು ಕೈಗೊಳ್ಳುವದರ ಮೂಲಕ ಪಟ್ಟಣಕ್ಕೆ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಪುರಸಭೆ ಒತ್ತು ನೀಡಲಾಗಿದೆ. ಹಾಗಾಗಿ ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಪುರಸಭೆಯ ಒಂದನೇ ವಾರ್ಡಿನ ಸದಸ್ಯರಾದ ಎಚ್ .ಆರ್. ನಾಗರತ್ನ ವೇದಮೂರ್ತಿ ತಿಳಿಸಿದ್ದಾರೆ .

ಹೊಳಲ್ಕೆರೆ ಪಟ್ಟಣದ ಕುಂಬಾರ ಹಟ್ಟಿಯಲ್ಲಿರುವ ಕಿರು ನೀರು ಸರಬರಾಜು ಟ್ಯಾಂಕನ್ನ ಸ್ವಚ್ಛಗೊಳಿಸುವ ಕೆಲಸಕ್ಕೆ ಚಾಲನೆ ನೀಡಿ ಮಾತನಾಡಿದರು.

ಚಿತ್ರದುರ್ಗದಲ್ಲಿ ಕಾವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರು ಕುಡಿದು ಜನರು ಅಸ್ವಸ್ಥಗೊಂಡ ಹಾಗೂ ಸಾವನ್ನಪ್ಪಿದ ಘಟನೆ ದುಃಖ ತರಿಸಿದೆ. ಹಾಗಾಗಿ ಪಟ್ಟಣದ ನಾಗರಿಕರು ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಪುರಸಭೆ ವತಿಯಿಂದ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಂತೆ ಹೊಳಲ್ಕೆರೆ ಪಟ್ಟಣದಲ್ಲಿರುವ ಎಲ್ಲಾ ಕುಡಿಯುವ ನೀರಿನ ಟ್ಯಾಂಕ್ಗಳನ್ನು ಸ್ವಚ್ಛಗೊಳಿಸಲು ಪುರಸಭೆಯ ಮುಖ್ಯ ಅಧಿಕಾರಿಗಳಾದ ಎ .ವಾಸಿಮ್ ನೇತೃತ್ವದಲ್ಲಿ ಪೌರಕಾರ್ಮಿಕರು ಹಾಗೂ ಸಿಬ್ಬಂದಿಗಳು ಹಗಲಿರಲು ಶ್ರಮಿಸುತ್ತಿದ್ದಾರೆ.


ಈ ಮೂಲಕ ನಾಗರಿಕರಿಗೆ ಶುದ್ಧ ನೀರು ಪೂರೈಕೆ ಮಾಡಲು ಒತ್ತು ನೀಡಲಾಗಿದೆ. ಶುದ್ಧ ನೀರು ಪೂರೈಕೆ ಮಾಡುವ ವಿಶ್ವಾಸವನ್ನು ಪುರಸಭೆ ನೀಡಿದ್ದು ಜನರು ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದರು

ಹೊಳಲ್ಕೆರೆ ಪಟ್ಟಣದಾದ್ಯಂತ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸುವ ಉದ್ದೇಶದಿಂದ ಹೊಳಲ್ಕೆರೆ ಪಟ್ಟಣದ ಒಂದನೇ ವಾರ್ಡಿನಲ್ಲಿರುವ ಮುಷ್ಠಿಗರ ಹಟ್ಟಿ, ಕುಂಬಾರ ಹಟ್ಟಿ ,ಬಳೆಗಾರ ಹಟ್ಟಿ ಸೇರಿದಂತೆ ಪಟ್ಟಣದಲ್ಲಿರುವ ಎಲ್ಲಾ ಟ್ಯಾಂಕ್ ಗಳನ್ನು ಪುರಸಭೆಯ ವತಿಯಿಂದ ಸ್ವಚ್ಛಗೊಳಿಸುವಂತಹ ಕೆಲಸವನ್ನು ಆರಂಭ ಮಾಡಲಾಗಿದೆ .ಚಿತ್ರದುರ್ಗದ ಕವಾಡಿಗರ ಹಟ್ಟಿಯಲ್ಲಿ ಪರಿಶುದ್ಧ ನೀರು ಕುಡಿದು ಅಸ್ವಸ್ಥರಾದ ಹಿನ್ನೆಲೆಯಲ್ಲಿ ಹೊಳಲ್ಕೆರೆ ಪಟ್ಟಣದಲ್ಲಿಯೂ ಸಹ ಕುಡಿಯುವ ನೀರಿನ ಪರೀಕ್ಷೆಗೆ ಒಳಪಡಿಸಲಾಗಿದ್ದು, ಎಲ್ಲಾ ಶುದ್ಧ ನೀರಿನ ಘಟಕ ಹಾಗೂ ಮಿನಿ ಸರಬರಾಜು ಟ್ಯಾಂಕಗಳನ್ನು ರಾಸಾಯನಿಕ ಸಿಂಪಡಿಸುವ ಮೂಲಕ ಸ್ವಚ್ಛಗೊಳಿಸಿ ನೀರನ್ನು ಜನರು ಬಳಕೆಗೆ ಯೋಗ್ಯಗೊಳಿಸಲಾಗಿದೆ, ಹಾಗಾಗಿ ಜನರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಪುರಸಭೆ ಎಲ್ಲಾ ಸಿಬ್ಬಂದಿಗಳು ಮುಖ್ಯ ಅಧಿಕಾರಿಯಾಗಿ ನೇತೃತ್ವದಲ್ಲಿ ಟ್ಯಾಂಕ್ಗಳನ್ನು ಸ್ವಚ್ಛಗೊಳಿಸಲಾಗಿದೆ, ಮತ್ತು ಜನರಿಗೆ ಬೇಕಾದ ಸೌಲಭ್ಯವನ್ನು ಕಲ್ಪಿಸಿಕೊಡಲು ಹೊತ್ತು ನೀಡಲಾಗಿದೆ ಎಂದು ಪುರಸಭೆಯ ಸದಸ್ಯರಾದ ಎಚ್‌ಆರ್ ನಾಗರತ್ನ ವೇದಮೂರ್ತಿ ತಿಳಿಸಿದ್ದಾರೆ.

ಪುರಸಭೆ ಮುಖ್ಯ ಅಧಿಕಾರಿ ವಾಸಿಂ ಮಾತನಾಡಿ, ಜಿಲ್ಲಾಧಿಕಾರಿಗಳ ಮಾರ್ಗ ದರ್ಶನದಂತೆ ಹೊಳಲ್ಕೆರೆ ಪಟ್ಟಣದಲ್ಲಿರುವ ಎಲ್ಲಾ ಕುಡಿಯುವ ನೀರಿನ ಟ್ಯಾಂಕ್ಗಳನ್ನು ಕಳೆದ ಎರಡು ದಿನಗಳಿಂದ ಶುದ್ಧಗೊಳಿಸ ಲಾಗುತ್ತಿದೆ ರಾಸಾಯನಿಕ ಸಿಂಪಡಿಸುವ ಮೂಲಕ ಸಂಪೂರ್ಣವಾಗಿ ಶುದ್ಧಗೊಳಿಸಿ ನೀರು ಪೂರೈಕೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಹಾಗಾಗಿ ನಾಗರೀಕರು ನೀರಿನ ಬಗ್ಗೆ ಹೆಚ್ಚು ಆತಂಕ ಪಡುವ ಅಗತ್ಯವಿಲ್ಲ ನೀರು ಕಲುಷಿತವಾಗದಂತೆ ಎಚ್ಚರಿಕೆ ವಹಿಸಲಾಗಿದೆ ಎಂದು ತಿಳಿಸಿದರು.

ಪುರಸಭೆಯ ಆರೋಗ್ಯ ಅಧಿಕಾರಿ ಶೌಕಾತ್ ನೀರು ಸರಬರಾಜು ಸಿಬ್ಬಂದಿ ರಂಗಸ್ವಾಮಿ ಸ್ವಾಮಿ ಸೇರಿದಂತೆ ಹಲವಾರು ಸಿಬ್ಬಂದಿಗಳು ಕೆಲಸ ಮಾಡುತ್ತಾರೆ. ಸಾರ್ವಜನಿಕರು ಸಮಸ್ಯೆ ಬಂದ ತಕ್ಷಣವೇ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

# ನಗರಾಧ್ಯಕ್ಷ ಎ.ಹರೀಶ್‌ರಿಂದ ರಕ್ತದಾನ



**ಚಿತ್ರದುರ್ಗ** : ವಸತಿ, ವಕ್ಫ್, ಅಲ್ಪಸಂಖ್ಯಾತ ಖಾತೆ ಸಚಿವ ಜಮೀರ್ ಅಹ್ಮದ್‌ಖಾನ್‌ರವರ ಜನ್ಮದಿನದ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದಿಂದ ಮಾಳಪ್ಪನಹಟ್ಟಿ ಸಮೀಪವಿರುವ ತೀಕ್ಷ್ಮ ಅಂಧರ ಶಾಲೆಯ ಮಕ್ಕಳಿಗೆ ಸಿಹಿ ವಿತರಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ನಗರಾಧ್ಯಕ್ಷ ಎ.ಹರೀಶ್ ರಕ್ತದಾನ ಮಾಡಿದರು.

ನಗರ ಯುವ ಕಾಂಗ್ರೆಸ್ ಅಧ್ಯಕ್ಷ ಯೂಸೂಫ್, ಮುಸ್ತಖ್ ಅಹಮದ್, ಸದ್ದಾಂ ಇನ್ನು ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಿವೈಎಸ್ಪಿಯಾಗಿ ರಾಜಣ್ಣ ಅಧಿಕಾರ ಸ್ವೀಕಾರ



**ಚಳ್ಳಕೆರೆ :** ಚಳ್ಳಕೆರೆ ಉಪವಿಭಾಗದ ನೂತನ ಡಿವೈಎಸ್ಪಿಯಾಗಿ ತುಮಕೂರಿನ ಡಿಸಿಆರ್‌ಬಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ರಾಜಣ್ಣ ಗುರುವಾರ ಅಧಿಕಾರ ಸ್ವೀಕರಿಸಿದರು.

ನಗರದ ಡಿವೈಎಸ್ಪಿ ಕಚೇರಿಯಲ್ಲಿ ನಿರ್ಗಮನ ಡಿವೈಎಸ್ಪಿ ರಮೇಶ್ ಕುಮಾರ್ ಅನುಪಸ್ಥಿತಿಯಲ್ಲಿ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು.

ಇದೇ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಚಳ್ಳಕೆರೆ ಉಪವಿಭಾಗದ ಇಂದು ಅಧಿಕಾರ ವಹಿಸಿಕೊಂಡಿದ್ದೇನೆ. ರಾಜ್ಯದಲ್ಲಿ ಚಳ್ಳಕೆರೆ ಉಪವಿಭಾಗಕ್ಕೆ ಉತ್ತಮ ಹೆಸರಿದೆ. ಪೊಲೀಸ್ ಇಲಾಖೆಯಲ್ಲಿ ಎಲ್ಲರೂ ಸೇರಿ ಕಾರ್ಯನಿರ್ವಹಿಸಿದರೆ ಮಾತ್ರ ಇಲಾಖೆಗೆ ಒಳ್ಳೆಯ ಹೆಸರನ್ನು ತರಲು ಸಾಧ್ಯವಾಗುತ್ತದೆ. ಈ ವಿಭಾಗದಲ್ಲಿ ಹೆಚ್ಚಿನ ಪ್ರಮಾಣದ ಅಪಘಾತ, ಕಳ್ಳತನ, ಸುಲಿಗೆ ಪ್ರಕರಣಗಳು ನಿಯಂತ್ರಣದಲ್ಲಿವೆ. ಶಾಂತಿ ಸುವ್ಯವಸ್ಥೆಯೂ ಸೇರಿದಂತೆ ಇಲಾಖೆಗೆ ಸಂಬಂಧಪಟ್ಟ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವೆ. ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಚರ್ಚಿಸಿ ಸಂಚಾರ ಹಾಗೂ ಇನ್ನಿತರ ಸಮಸ್ಯೆಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸುವೆ. ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಸಾರ್ವಜನಿಕರ ಸೇವೆಯ ಒಂದು ಭಾಗವಾಗಿದೆ ಎಂದರು.

ತಳಕು ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ, ಠಾಣಾ ಇನ್ಸ್‌ಪೆಕ್ಟರ್ ರಾಜ ಫಕ್ರುದ್ದೀನ್ ದೇಸಾಯಿ, ಪಿಎಸ್‌ಐಗಳಾದ ಕೆ.ಸತೀಶ್‌ನಾಯ್ಕ, ಎಂ.ಕೆ.ಬಸವರಾಜ, ಧರೆಪ್ಪ ಬಾಳಪ್ಪ ದೊಡ್ಡಮನಿ, ಶಿವರಾಜು, ಕಾಂತರಾಜು, ದೇವರಾಜ, ಗಾದಿಲಿಂಗ ನೂತನ ಡಿವೈಎಸ್ಪಿಯವರನ್ನು ಭೇಟಿ ಮಾಡಿ ಶುಭ ಹಾರೈಸಿದರು.

### ಪಿಹೆಚ್‌ಡಿ ಪದವಿ



**ಚಿತ್ರದುರ್ಗ :** ಜಿಲ್ಲೆಯ ಭರಮಸಾಗರ ಸಮೀಪವಿರುವ ಕೋಡಿರಂಗವ್ವನಹಳ್ಳಿ ಗ್ರಾಮದಲ್ಲಿರುವ ಮುರಾರ್ಜಿ ವಸತಿ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಗೌಸುಲ್ ಆಝಂ ಅವರಿಗೆ ಕುವೆಂಪು ವಿ.ವಿ.ಯಲ್ಲಿ ಇತ್ತೀಚಿಗೆ ನಡೆದ 33ನೇ ಘಟಿಕೋತ್ಸವದಲ್ಲಿ ಪಿಹೆಚ್‌ಡಿ ಪದವಿ ಪ್ರದಾನ ಮಾಡಲಾಯಿತು.

ಜೀವ ರಸಾಯನ ಶಾಸ್ತ್ರ ವಿಭಾಗದಲ್ಲಿ 'ಕ್ಯಾರಕ್ಟರೈಸೇಷನ್ ಆಫ್ ಬಯೋ ಆಕ್ಟೀವ್ ಕಾಂಪೌಂಡ್ ರೂಸ್ ಮೈಸರ್ನೆಸಿಸ್ ಫಾರ್ ಫಾರ್ಮಕಾಲಾಜಿಕಲ್ ಅಂಡ್ ಸೈಟೋಟಾಕ್ಸಿಕ್ ಆಕ್ಟಿವಿಟೀಸ್' ಎಂಬ ವಿಷಯದಲ್ಲಿ ಮಂಡಿಸಿದ ಮಹಾ ಪ್ರಬಂಧಕ್ಕೆ ಡಾಕ್ಟ–ರೇಟ್ ಪದವಿ ಲಭಿಸಿದೆ.

ಪ್ರೊ.ಜಿ.ಜಿ.ಸತೀಶ್ ಅವರ ಮಾರ್ಗದರ್ಶನದಲ್ಲಿ, ಪ್ರೊ. ರಿಯಾಝ್ ಅವರ ಉಪಮಾರ್ಗದರ್ಶನದಲ್ಲಿ ಗೌಸುಲ್ ಆಝಂ ಅವರು ಪ್ರಬಂಧ ಮಂಡಿಸಿದ್ದಾರೆ.

ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರ ಅಧ್ಯಕ್ಷತೆಯಲ್ಲಿ ನಡೆದ ಘಟಿಕೋತ್ಸವದಲ್ಲಿ ಉಪಕುಲಪತಿ ಬಿ.ಪಿ.ವೀರಭದ್ರಪ್ಪ, ತಿರುವಂತಪುರದ ಐಇಎಸ್‌ಟಿಯ ಕುಲಾಧಿಪತಿ ಪದ್ಮಭೂಷಣ, ಪದ್ಮಶ್ರೀ ಪುರಸ್ಕೃತ ಡಾ.ಸುರೇಶ್ ಸೇರಿದಂತೆ ವಿವಿಧ ಗಣ್ಯರು ಭಾಗವಹಿಸಿದ್ದರು.

ಗೌಸುಲ್ ಆಝಂ ಅವರು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಪಟ್ಟಣದ ಟೈಲರಿಂಗ್ ಉದ್ಯೋಗ ನಿರ್ವಹಿಸುತ್ತಿದ್ದ ದಿ. ಅಬ್ದುಲ್ ರೌಫ್ ಸಾಬ್, ಶ್ರೀಮತಿ ಫ್ಯಾರೀಮಾ ಅವರ ಪುತ್ರರಾಗಿದ್ದಾರೆ.

### ಮೇರಿ ಮಾತಿ ಮೇರಾ ದೇಶ್

**ಚಿತ್ರದುರ್ಗ :** ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂತಿಮ ಘಟ್ಟವಾಗಿ "ಮೇರಿ ಮಾತಿ ಮೇರಾ ದೇಶ್" ಪರಿಕಲ್ಪನೆಯಡಿ ಕಾರ್ಯಕ್ರಮಗಳನ್ನು ಇದೇ ಆಗಸ್ಟ್ 9 ರಿಂದ 15 ರವರೆಗೆ ದೇಶಾದ್ಯಂತ ಗ್ರಾಮೀಣ, ನಗರ ಹಾಗೂ ರಾಜಧಾನಿ ಮಟ್ಟದಲ್ಲಿ ಆಯೋಜಿಸಲಾಗುತ್ತದೆ.

ವೀರ ಪುತ್ರರಿಗೆ ಶ್ರದ್ಧಾಂಜಲಿ ಅರ್ಪಿಸಿ, ಅವರುಗಳ ಸ್ಮರಣಾರ್ಥ "ಶಿಲಾಫಲಕಂ" ಸ್ಥಾಪಿಸುವುದರೊಂದಿಗೆ ನಾನಾ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದ್ದು, ಈ ಕಾರ್ಯಕ್ರಮಗಳಲ್ಲಿ ಸ್ವಾತಂತ್ರ ಹೋರಾಟಗಾರರು, ಸೇನೆಯ ಶೌರ್ಯಪ್ರಶಸ್ತಿ ವಿಜೇತರು, ಸಶಸ್ತ್ರಪಡೆಗಳ ಹುತಾತ್ಮರ ವೀರ ನಾರಿಯರು, ಸೈನಿಕರು, ಮಾಜಿ ಸೈನಿಕರುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವುದರೊಂದಿಗೆ ಸಹಕರಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಾಲತಾಣ ``https://yuva.gov.in/meri_maati_mera_desh" ವನ್ನು ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

## ಮುಖ್ಯಮಂತ್ರಿ ಜನ್ಮದಿನಾಚರಣೆ ಕಾರ್ಯಕ್ರಮ




ಮೊಳಕಾಲ್ಮುರು ಪಟ್ಟಣದ ಶಾಸಕರ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮ

**ಮೊಳಕಾಲ್ಮುರು :** ನುಡಿದಂತೆ ನಡೆಯುವ ಮತ್ತು ನಡೆದಂತೆ ನುಡಿಯುವ ಹೆಮ್ಮೆಯ ಜನ ನಾಯಕ ಅಭಿವೃದ್ಧಿಯ ಹರಿಕಾರ ಬಡವರ ದೀನ ದಲಿತರ ಆಶಾಕಿರಣ ಸರ್ವಜನಾಂಗದ ಅಭಿವೃದ್ಧಿಯ ಹರಿಕಾರ ಮುಖ್ಯ ಮಂತ್ರಿ ಸಿದ್ದರಾಮಯ್ಯ ನವರಿಗೆ ಭಗವಂತ ಆಯುರಾರೋಗ್ಯ ನೀಡಲಿ ಮತ್ತು ಸರ್ವ ಜನಾಂಗದ ಅಭಿವೃದ್ಧಿಗೆ ಸೇವೆ ಸಲ್ಲಿಸುವ ಶಕ್ತಿ ಬರಿಸಲಿ ಎಂದು ಶುಭ ಹಾರೈಸಿದರು

ಮೊಳಕಾಲ್ಮೂರು ಪಟ್ಟಣದ ಶಾಸಕರ ಭವನದಲ್ಲಿ ಮುಖ್ಯ ಮಂತ್ರಿ ಸಿದ್ದರಾಮಯ್ಯನವರ 76ನೇ ಜನ್ಮದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ, ಮುಖಂಡರ, ಅಭಿಮಾನಿಗಳ ಸಮ್ಮುಖದಲ್ಲಿ ಶಾಸಕರ ಭವನದಲ್ಲಿ ಕೇಕ್ ಕತ್ತರಿಸಿ ಸಿಹಿ ಹಂಚಿ ಶುಭ ಕೋರಿದರು

ಸಂದರ್ಭದಲ್ಲಿ ಪಿಎಸ್‌ಐಪಾಂಡುರಂಗಪ್ಪ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕಲೀಮುಲ್ಲಾ, ಪಟ್ಟಣ ಪಂಚಾಯತಿ ಸದಸ್ಯರಾದ ಎಸ್ ಖಾದರ್, ಕಾಂಗ್ರೆಸ್ ಮುಖಂಡರಾದ ಜಿ ಪ್ರಕಾಶ್, ಬಡೋಬಯ್ಯ ಗುರುರಾಜಪ್ಪ ಪಿ ಗೋಪಾಲ್ ,ನಾಗಸಮುದ್ರ ಗೋವಿಂದಪ್ಪ, ಕೊಂಡಾಪುರದ ಪರಮೇಶಪ್ಪ ,ಬಿ.ಟಿ. ನಾಗಭೂಷಣ್ , ನಾಗರಾಜ, ವಸಿ ಉಲ್ಲಾ, ಕಾಂಗ್ರೆಸ್ ಕಾರ್ಯಕರ್ತರು ಇನ್ನು ಹಲವರು ಇದ್ದರು

## ಒಕ್ಕೂಟದ ಪದಾಧಿಕಾರಿಗಳಿಗೆ ತರಬೇತಿ ಕಾರ್ಯಗಾರ



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ಹಮ್ಮಿಕೊಳ್ಳಲಾಗಿದ್ದ ತರಬೇತಿ ಕಾರ್ಯಗಾರ

**ಮೊಳಕಾಲ್ಮುರು :** ಮೊಳಕಾಲ್ಮುರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಯೋಜನಾ ಕಚೇರಿಯ ವ್ಯಾಪ್ತಿಯ ಮೂರು ವಲಯದ ಒಕ್ಕೂಟದ ಪದಾಧಿಕಾರಿಗಳ ತರಬೇತಿ ಕಾರ್ಯಗಾರವನ ್ನಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮದಲ್ಲಿ ನಮ್ಮ ಜಗಳೂರು ಜಿಲ್ಲಾ ನಿರ್ದೇಶಕ ರಾದ ಶ್ರೀಯುತ ಜನಾರ್ಧನ್ ಚಿತ್ರದುರ್ಗ ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷರಾದ ಷಡಕ್ಷರಪ್ಪ ತಾಲೂಕಿನ ಯೋಜನಾಧಿಕಾರಿಗಳಾದ ಶ್ರೀಯುತ ಶಶಿಧರ್ ಒಕ್ಕೂಟದ ಪದಾಧಿಕಾರಿಗಳು ಮತ್ತು ಮೂರು ವಲಯದ ಮೇಲ್ವಿಚಾರಕರು ಹಾಗೂ ಸ್ಥಳೀಯ ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಕರಡಿ ಸೆರೆಗೆ ವಿದ್ಯಾರ್ಥಿಗಳ ಒತ್ತಾಯ

**ಹೊಸದುರ್ಗ :** ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಿಂಭಾಗವಿರುವ ಎಸ್ಸಿ ಎಸ್ಟಿ ಮತ್ತು ಬಿಸಿಎಂ ಹಾಸ್ಟೆಲ್ ಗಳ ಸಮೀಪ ಹಗಲು ರಾತ್ರಿ ಎನ್ನದೇ, ಕರಡಿಗಳು ಪದೇ ಪದೇ ಕಾಣಿಸಿಕೊಳ್ಳುತ್ತಿದ್ದು, ಶಾಲಾ ಕಾಲೇಜುಗಳಿಗೆ ತೆರಳಲು ಹಾಗೂ ಹಾಸ್ಟೆಲ್ ನಿಂದ ಹೊರಬರಲು ಆತಂಕ ಎದುರಾಗಿದೆ. ಕೂಡಲೇ ಕರಡಿಗಳನ್ನು ಸೆರೆ ಹಿಡಿಯಿರಿ ಎಂದು ಇಲ್ಲಿನ ವಲಯ ಅರಣ್ಯಾಧಿಕಾರಿ ಕಚೇರಿಗೆ ಶುಕ್ರವಾರ ಭಾರತೀಯ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ತೆರಳಿ, ಪ್ರತಿಭಟಿಸುವ ಮೂಲಕ ಮನವಿ ಪತ್ರ ನೀಡಿದರು.

ಇದೇ ಸಂದರ್ಭದಲ್ಲಿ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಭಾರತೀಯ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ತಾಲೂಕು ಉಪಾಧ್ಯಕ್ಷ ಲೋಹಿತ್ ಕುಮಾರ್ ಮಾತನಾಡಿ, ಕಳೆದ ಒಂದು ವಾರಗಳಿಂದ ಹಾಸ್ಟೆಲ್ ಸಮೀಪ ಕರಡಿಗಳು ಬರುತ್ತಿದ್ದು, ಕರಡಿಗಳನ್ನು ನೋಡಿದ ವಿದ್ಯಾರ್ಥಿಗಳು ಹಾಸ್ಟೆಲಿನಿಂದ ಹೊರಬರಲು ಭಯಭೀತರಾಗಿದ್ದಾರೆ. ಅರಣ್ಯ ಇಲಾಖೆಯವರು 15 ದಿನಗಳ ಹಿಂದೆ ಬೆಂಗಳೂರಿನ ವಿಶೇಷ ತಂಡದ ಸಹಾಯದಿಂದ ಎರಡು ಕರಡಿಗಳನ್ನು ಹೇಗೆ ಬಲೆ ಮತ್ತು ಬೋನ್ ಅಳವಡಿಸಿ ಸೆರೆ ಹಿಡಿದಿದ್ದೀರಿ. ಅದರಂತೆಯೇ ಹಾಸ್ಟೆಲ್ ಸಮೀಪದ ಬೆಟ್ಟದಲ್ಲಿರುವ ಕರಡಿಗಳನ್ನು ಸೆರೆಹಿಡಿದು ಅರಣ್ಯಕ್ಕೆ ಬಿಡಿ ಎಂದರು.

ಒಂದೇ ಹತ್ತಿರ 4 ಹಾಸ್ಟೆಲ್ ಗಳಿದ್ದು, ಇಲ್ಲಿ 500ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದಾರೆ. ಕರಡಿಗಳಿಂದ ಯಾವುದೇ ಅನಾಹುತ ಆಗುವುದಕ್ಕಿಂತ ಮುಂಚಿತವಾಗಿ ಜಾಗೃತಿ ವಹಿಸಿ, ಕರಡಿಗಳನ್ನು ಸೆರೆ ಹಿಡಿಯಿರಿ. ಹೀಗೆಯೇ ನಿರ್ಲಕ್ಷ ವಹಿಸಿ ಕರಡಿಗಳಿಂದ ಯಾವುದೇ ವಿದ್ಯಾರ್ಥಿಗಳಿಗೆ ಸಮಸ್ಯೆ ಯಾದರೂ, ಅದಕ್ಕೆ ಅರಣ್ಯ ಇಲಾಖೆಯವರೇ ಕಾರಣರಾಗುತ್ತೀರಿ. ನಿರ್ಲಕ್ಷ್ಯ ಮಾಡದೆ ಕರಡಿಗಳನ್ನು ಸೆರೆಹಿಡಿದು, ವಿದ್ಯಾರ್ಥಿಗಳು ನೆಮ್ಮದಿಯಾಗಿರುವಂತಹ ವಾತಾವರಣ ನಿರ್ಮಾಣ ಮಾಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಹಾಸ್ಟೆಲ್ ವಿದ್ಯಾರ್ಥಿಗಳು ಹಾಗೂ ಶ್ರೀ ಜಗದ್ಗುರು ಮುರುಘಾ ರಾಜೇಂದ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.



## 5 ಲಕ್ಷ ಅನುದಾನ ಪತ್ರ ಹಸ್ತಾಂತರ



ಕರ್ನಾಟಕ ರಾಜ್ಯ ಪಶುವೈದ್ಯಕೀಯ ಸಂಘದಿಂದ ಚಿತ್ರದುರ್ಗದಲ್ಲಿ ನಿರ್ಮಾಣಗೊಳ್ಳುತ್ತಿರುವ ಕಟ್ಟಡಕ್ಕೆ ಡಾ.ಡಿ.ವೀರೇಂದ್ರ ಹೆಗಡೆರವರು ಮಂಜೂರು ಮಾಡಿರುವ ಐದು ಲಕ್ಷ ರೂ.ಗಳ ಮಂಜೂರಾತಿ ಪತ್ರವನ್ನು ದಿನೇಶ್ ಪೂಜಾರಿ ಹಸ್ತಾಂತರಿಸಿದರು.

**ಚಿತ್ರದುರ್ಗ :** ಸ್ವ–ಸಹಾಯ ಸಂಘಗಳ ಮಹಿಳೆಯರನ್ನು ಆರ್ಥಿಕವಾಗಿ ಸದೃಢರನ್ನಾಗಿಸುವಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೊದಲಿನಿಂದಲೂ ಕೆಲಸ ಮಾಡಿಕೊಂಡು ಬರುತ್ತಿದೆ ಎಂದು ಯೋಜನೆಯ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ತಿಳಿಸಿದರು.

ಕರ್ನಾಟಕ ರಾಜ್ಯ ಪಶು ವೈದ್ಯಕೀಯ ಸಂಘ ಚಿತ್ರದುರ್ಗ ವತಿಯಿಂದ ಚಳ್ಳಕೆರೆ ರಸ್ತೆಯಲ್ಲಿರುವ ಶ್ರೀರಾಮ ಲೇಔಟ್‌ನಲ್ಲಿ ಒಂದು ಕೋಟಿ 36 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ತರಬೇತಿ ಕಟ್ಟಡ–ಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ಯೋಜನೆಯ ಸಮುದಾಯ ವಿಭಾಗದಿಂದ ಮಂಜೂರು ಮಾಡಿರುವ ಐದು ಲಕ್ಷ ರೂ.ಗಳ ಮಂಜೂರಾತಿ ಪತ್ರವನ್ನು ಪಶು ವೈದ್ಯಕೀಯ ಸಂಘದ ಪದಾಧಿಕಾರಿಗಳಿಗೆ ಗುರುವಾರ ವಿತರಿಸಿ ಮಾತನಾಡಿದರು.

ವರ್ಷಕ್ಕೆ ನೂರು ಕೆರೆಗಳ ಹೂಳೆತ್ತುವ ಕೆಲಸವನ್ನು ಮಾಡುತ್ತಿದೆ. 401 ಶುದ್ದ ಕುಡಿಯುವ ನೀರಿನ ಘಟಕವನ್ನು ತೆರೆದಿದೆ. ಹದಿನೈದು ಸಾವಿರ ನಿರ್ಗತಿಕರ ಕುಟುಂಬಳಿಗೆ ತಿಂಗಳಿಗೆ ಒಂದು ಸಾವಿರ ರೂ.ಗಳನ್ನು ನೀಡಲಾಗುತ್ತಿದೆ. ಸ್ವಸಹಾಯ ಸಂಘದಲ್ಲಿನ ಮಹಿಳೆಯರ ಮಕ್ಕಳ ಶಿಕ್ಷಣ–ಕ್ಕಾಗಿ ಎಪ್ಪತ್ತು ಸಾವಿರ ಮಕ್ಕಳಿಗೆ 60 ಕೋಟಿ ರೂ.ಗಳನ್ನು ಇದುವರೆವಿಗೂ ಖರ್ಚು ಮಾಡಲಾಗಿದೆ. ಸಮುದಾಯ ಭವನ, ದೇವಸ್ಥಾನದ ಜೀರ್ಣೋದ್ದಾರಕ್ಕೆ ಧನ ಸಹಾಯ, ಶಾಲೆಗಳಿಗೆ ಕಾಂಪೌಂಡ್, ಬೆಂಚ್, ಡೆಸ್ಕ್‌ಗಳನ್ನು ನೀಡಲಾಗಿದೆ ಎಂದರು.

ಪಶುವೈದ್ಯಕೀಯ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ.ಜಯದೇವಪ್ಪ ಮಾತನಾಡಿ ಚಿತ್ರದುರ್ಗ ಪಶುವೈದ್ಯಕೀಯ ಇಲಾಖೆ ಯವರು ಸ್ವಂತ ಹಣ ಹಾಕಿಕೊಂಡು ಕಟ್ಟಡ ಆರಂಭಿಸಿರುವುದು ಉತ್ತಮ ಬೆಳವಣಿಗೆ. ಇದಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ಐದು ಲಕ್ಷ ರೂ.ಗಳನ್ನು ಮಂಜೂರು ಮಾಡಿರುವುದು ನಿಮಗೆ ಸಿಕ್ಕಿರುವ ಪ್ರಸಾದ ಎಂದು ಭಾವಿಸಿ ಕಟ್ಟಡದ ಕೆಲಸಕ್ಕೆ ಬಳಸಿಕೊಳ್ಳಿ. ಜಾಸ್ತಿ ತಾಪತ್ರೆ ಮಾಡಿಕೊಳ್ಳಬೇಡಿ. ಇದ್ದುದರಲ್ಲಿಯೇ ಹಾಸಿಗೆ ಇದ್ದಷ್ಟು ಕಾಲ ಚಾಚಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಪಶುವೈದ್ಯಕೀಯ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಮಾತನಾಡುತ್ತ ಶ್ರೀ–ಕ್ಷೇತ್ರ ಧರ್ಮಸ್ಥಳವೆಂದರೆ ಸಾಂಸ್ಕೃತಿಕ, ಧಾರ್ಮಿಕವಾಗಿ ಪ್ರಸಿದ್ದಿ ಪಡೆದಿರುವ ಪುಣ್ಯಕ್ಷೇತ್ರ. ಇಲ್ಲಿಂದ ನಿಮ್ಮ ಕಟ್ಟಡಕ್ಕೆ ಐದು ಲಕ್ಷ ರೂ.ಗಳ ನೆರವು ಸಿಕ್ಕಿರುವುದು ಪುಣ್ಯ. ಕಟ್ಟಡಕ್ಕೆ ಅನೇಕರು ನೆರವು ನೀಡಿದ್ದಾರೆ. ಇನ್ನು ನೀಡುವವರು ಸಾಕಷ್ಟು ಜನ ಇದ್ದಾರೆ. ಎಲ್ಲವನ್ನು ಬಳಸಿಕೊಂಡು ಸುಂದರವಾದ ಕಟ್ಟಡ ನಿರ್ಮಿಸೋಣ ಎಂದು ಹೇಳಿದರು.

ಕರ್ನಾಟಕ ರಾಜ್ಯ ಪಶುವೈದ್ಯಕೀಯ ಸಂಘದ ಕಾರ್ಯದರ್ಶಿ ಡಾ.ತಿಪ್ಪೇಸ್ವಾಮಿ ಮಾತನಾಡಿ ಆರಂಭದಲ್ಲಿ ಎಲ್ಲಾ ವೈದ್ಯರುಗಳು ತಲಾ ಇಪ್ಪತ್ತೈದು ಸಾವಿರ ರೂ.ಗಳನ್ನು ಕ್ರೂಢೀಕರಿಸಿ ಕಟ್ಟವನ್ನು ಕಟ್ಟಲು ಆರಂಭಿಸಿ ನಂತರ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವನ್ನು ಸಂಪರ್ಕಿಸುವ ತೀರ್ಮಾನ ತೆಗೆದುಕೊಂಡು ಅಲ್ಲಿಗೆ ಎಲ್ಲರೂ ಹೋಗಿ ನಮ್ಮ ಮನವಿಯನ್ನು ಸಮರ್ಪಿಸಿದಾಗ ಡಿ.ವೀರೇಂದ್ರಹೆಗಡೆರವರು ಸಂಪೂರ್ಣ ವಾಗಿ ಓದಿ ಕಟ್ಟಡ ಕಟ್ಟುತ್ತಿರುವುದು ಸದುದ್ದೇಶಕ್ಕೆ ಎಂದು ಮನವರಿಕೆಯಾದ ನಂತರ ಐದು ಲಕ್ಷ ರೂ.ಗಳನ್ನು ಮಂಜೂರು ಮಾಡಿದ್ದಾರೆಂದು ಕೃತಜ್ಞತೆ ಸಲ್ಲಿಸಿದರು.

ಜಿಲ್ಲೆಯಲ್ಲಿ ಐವತ್ತು ಸಾವಿರ ಬುಡಕಟ್ಟು ಕುಟುಂಬಗಳು ಕುರಿ ಮೇಕೆ ಸಾಕಾಣಿ–ಕೆ ಮಾಡುತ್ತಿವೆ. ಜಾನುವಾರುಗಳನ್ನು ಸರಿಯಾಗಿ ನಿರ್ವಹಣೆ ಮಾಡದಿದ್ದಾಗ ರೋಗಕ್ಕೆ ತುತ್ತಾಗಿ ಸಾವನ್ನಪ್ಪುತ್ತವೆ. ಅಂತಹ ಸಂದರ್ಭದಲ್ಲಿ ಸೂಕ್ತ ಮಾಹಿತಿ ಹಾಗೂ ಅರಿವು ಮೂಡಿಸುವ ಮೂಲಕ ತರಬೇತಿ ನೀಡಲು ಈ ಕಟ್ಟಡ ಸಹಕಾರಿಯಾಗಲಿದೆ. ಅದರಂತೆ ಹೊಸ ಹೊಸ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕಾಗಿರುವುದರಿಂದ ಪಶುವೈದ್ಯರಿಗೂ ಇಲ್ಲಿ ತರಬೇತಿ ಕೊಡಲಾಗುವುದು ಎಂದು ಮಾಹಿತಿ ನೀಡಿದರು.

ಕರ್ನಾಟಕ ರಾಜ್ಯ ಪಶುವೈದ್ಯಕೀಯ ಸಂಘದ ಚಿತ್ರದುರ್ಗ ಘಟಕದ ಕಾರ್ಯಾಧ್ಯಕ್ಷ ಡಾ.ಬಾಬುರತ್ನ, ಉಪಾಧ್ಯಕ್ಷ ಡಾ.ಹರೀಶ್, ಖಜಾಂಚಿ ಡಾ.ರಂಗಸ್ವಾಮಿ, ಡಾ.ಇಂದಿರಾಬಾಯಿ ಹಾಗೂ ಶ್ರೀ–ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ತಾಲ್ಲೂಕು ಅಧ್ಯಕ್ಷ ಬಿ.ಅಶೋಕ್ ವೇದಿಕೆಯಲ್ಲಿದ್ದರು. ಮೇಲ್ವಿಚಾರಕ ಸಂದೀಪ್ ಕಾರ್ಯಕ್ರಮ ನಿರೂಪಿಸಿದರು.

## ಬೆಳೆಗಳ ರೋಗ ನಿಯಂತ್ರಣಕ್ಕೆ ಕೃಷಿ ವಿಜ್ಞಾನಿ ಸಲಹೆ



ಚಳ್ಳಕೆರೆ ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ವಿವಿಧ ಗ್ರಾಮಗಳಿಗೆ ಭೇಟಿ ಶೇಂಗಾ, ತೊಗರಿ ಬೆಳೆಯ ಬಗ್ಗೆ ಕೃಷಿ ವಿಜ್ಞಾನಿ, ಅಧಿಕಾರಿಗಳ ತಂಡ ಪರಿಶೀಲನೆ ನಡೆಸಿದರು.

**ಚಳ್ಳಕೆರೆ :** ತಾಲ್ಲೂಕಿನಾದ್ಯಂತ ನಿರೀಕ್ಷಿತ ಮಟ್ಟದಲ್ಲಿ ಮುಂಗಾರು ಹಂಗಾಮು ಆರಂಭವಾಗಿದ್ದರೂ ಸಹ ತಡವಾಗಿ ಬಂದ ಮಳೆಯಿಂದ ಉತ್ತೇಜನಗೊಂಡ ರೈತರು ಬಿತ್ತನೆ ಕಾರ್ಯವನ್ನು ಚುರುಕಿನಿಂದ ಆರಂಭಿಸಿ 66 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ, 6500 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ತೊಗರಿಬೇಳೆಯನ್ನು ಬೆಳೆದಿದ್ದು ಇತ್ತೀಚಿಗಷ್ಟೇ ಬೆಳೆಗೆ ಮೋಡಮುಸುಕಿದ ವಾತಾವಣದಿಂದ ಕೆಲ ರೋಗಗಳು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಶುಕ್ರವಾರ ಕೃಷಿ ವಿಜ್ಞಾನಿ ಮತ್ತು ಅಧಿಕಾರಿಗಳ ತಂಡದೊಂದಿಗೆ ವಿವಿಧ ಗ್ರಾಮಗಳಿಗೆ ತೆರಳಿ ಬೆಳೆಗೆ ತಗುಲಿರುವ ರೋಗದ ಬಗ್ಗೆ ವಾಸ್ತವ ಸ್ಥಿತಿಯನ್ನು ಪರಿಶೀಲನೆ ನಡೆಸಲಾಯಿತು ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದ್ದಾರೆ.

ಕೃಷಿ ವಿಜ್ಞಾನಿ ಓಂಕಾರಪ್ಪ ಮತ್ತು ತಂಡ ತಾಲ್ಲೂಕಿನ ಗೋಪನಹಳ್ಳಿ, ಅಡವಿಚಿಕ್ಕೇನಹಳ್ಳಿ, ರೆಡ್ಡಿಹಳ್ಳಿ, ಸಾಣಿಕೆರೆ, ಗಂಜಿಗುಂಟೆ, ಸೋಮಗುದ್ದು ಮುಂತಾದ ಗ್ರಾಮಗಳಿಗೆ ತೆರಳಿ ಶೇಂಗಾ ಮತ್ತು ತೊಗರಿ ಬೆಳೆಯನ್ನು ಪರಿಶೀಲಿಸಲಾಯಿತು. ಶೇಂಗಾ ಬೆಳೆಗೆ ಸುಳಿ ನಂಜಾಣು, ಅಫಿಡ್ ಮತ್ತು ತ್ರಿಪ್ಸ್ ರಸ ಹೀರುವ ಕೀಟಾಣುಗಳು ಹೆಚ್ಚಿನ ಸಂಖ್ಯೆಯಲ್ಲಿ ಶೇಂಗಾ ಬೆಳೆಗೆ ವ್ಯಾಪಿಸಿದ್ದು ಅವುಗಳ ನಿರ್ಮೂಲನೆಗೆ ಕೃಷಿ ವಿಜ್ಞಾನಿ ಓಂಕಾರಪ್ಪ ಕೆಲ ಸಲಹೆ ನೀಡಿದರು. ಅದರಂತೆ ತೊಗರಿ ಬೆಳೆಗೂ ಸಹ ಹಳದಿ ಎಲೆ ರೋಗ ಕಾಣಿಸಿಕೊಳ್ಳಲು ಆರಂಭಿಸಿದೆ. ಇದನ್ನು ನಿಯಂತ್ರಿಸಲು ಉಪಯೋಗಿಸಬೇಕಾದ ಔಷಧದ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಇದೇ ಸಂದರ್ಭದಲ್ಲಿ ರೈತರು ಯಾವುದೇ ಸಮಯದಲ್ಲಿ ತಮ್ಮ ಬೆಳೆಯಲ್ಲಿ ಯಾವುದೇ ರೋಗಗಳು ಕಾಣಿಸಿಕೊಂಡಲ್ಲಿ ಕೂಡಲೇ ಕೃಷಿ ಇಲಾಖೆಯ ಕಚೇರಿ, ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬೇಕು.

ಹಿರಿಯ ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ ಮಾತನಾಡಿ, ಇತ್ತೀಚಿಗೆ ತೇವಾಂಶ ಹೆಚ್ಚಾದ ಹಿನ್ನೆಲೆಯಲ್ಲಿ ತೆ–ೂಟಗಾರಿಕೆ ಬೆಳೆಗಳಲ್ಲೂ ಸಹ ರೋಗಗಳು ಕಾಣಿಸಿಕೊಳ್ಳಲು ಆರಂಭಿಸಿವೆ. ಪ್ರತಿಯೊಂದು ರೋಗವನ್ನು ನಿರ್ಮೂಲನೆ ಮಾಡುವ ಶಕ್ತಿ ಕೀಟನಾಶಕಗಳಲ್ಲಿದೆ. ರೈತರು ಯಾವುದೇ ರೋಗ ಕಂದಲ್ಲಿ ಕೂಡಲೇ ಮಾಹಿತಿ ನೀಡಬೇಕು ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T